ಸಂಪುಟ : 10 ಸಂಚಿಕೆ: 277 ಪುಟ : 4+2 ಬೆಲೆ: 3.00 ಗುರುವಾರ ಡಿಸೆಂಬರ್ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 277 Pages : 4+2 Price : 3.00 Thursday December 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವಿವಿಧ ನೂತನ ಕಟ್ಟಡಗಳ ಕಾಮಗಾರಿಗಳ ಶಂಕುಸ್ಥಾಪನೆ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ವಿಶ್ವವಿದ್ಯಾಲಯಕ್ಕೆ ಯಾವುದೇ ಹಣಕಾಸಿನ ತೊಂದರೆಯಿಲ್ಲ



ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ರೂ. 37 ಕೋಟಿ ವೆಚ್ಚದಲ್ಲಿ ಗ್ರಂಥಾಲಯ, ಉಪಹಾರ ಗೃಹ, ಅನೆಕ್ಸ್ ಕಟ್ಟಡ, ಅತಿಥಿ ಗೃಹ ಹಾಗೂ ಬಾಲಕಿಯರ ವಸತಿ ನಿಲಯ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದ್ದು, ರೂ.10 ಕೋಟಿ ವೆಚ್ಚದಲ್ಲಿ ಗ್ರಂಥಾಲಯ ಕಟ್ಟಡವನ್ನು ನಿರ್ಮಿಸಲಾಗುತ್ತದೆ. ಒಟ್ಟಾರೆಯಾಗಿ 2531.05 ಚ.ಮೀ. ವಿಸ್ತೀರ್ಣದಲ್ಲಿ ಸುಮಾರು 460 ಆಸನಗಳ ಸಾಮರ್ಥ್ಯದ ಗ್ರಂಥಾಲಯ ನಿರ್ಮಾಣವಾಗಲಿದೆ. ರೂ.5 ಕೋಟಿ ವೆಚ್ಚದಲ್ಲಿ ಉಪಹಾರ ಗೃಹ ಕಟ್ಟಡ ನಿರ್ಮಾಣವಾಗಲಿದೆ. 993.89 ಚ.ಮೀ. ವಿಸ್ತೀರ್ಣದ ನೆಲಮಹಡಿಯ ಉಪಹಾರ ಇದಾಗಿದ್ದು, ಸುಮಾರು 236 ಆಸನಗಳ ಸಾಮರ್ಥ್ಯವನ್ನು ಹೊಂದಿರಲಿದೆ. ಸುಮಾರು ರೂ.2 ಕೋಟಿ ವೆಚ್ಚದಲ್ಲಿ ಬಾಲಕಿಯರ ವಸತಿ ನಿಲಯ ಕಟ್ಟಡದ ಕಾಮಗಾರಿ ನಡೆಯಲಿದೆ. ನೆಲಮಹಡಿಯ 567.19 ಚ.ಮೀ. ವಿಸ್ತೀರ್ಣದಲ್ಲಿ 10 ಕೊಠಡಿಗಳನ್ನು ಒಳಗೊಂಡ ವಸತಿ ನಿಲಯ ನಿರ್ಮಾಣವಾಗಲಿದೆ.



**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದಲ್ಲಿ ಗ್ರಂಥಾಲಯ, ಉಪಹಾರ ಗೃಹ, ಅನೆಕ್ಸ್ ಕಟ್ಟಡ, ಅತಿಥಿ ಗೃಹ ಹಾಗೂ ಬಾಲಕಿಯರ ವಸತಿ ನಿಲಯ ಕಟ್ಟಡಗಳ ಕಾಮಗಾರಿಗಳನ್ನು 37 ಕೋಟಿ ರೂ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿದೆ. ಈ ಎಲ್ಲಾ ಕಾಮಗಾರಿಗಳನ್ನು 11 ತಿಂಗಳ ಕಾಲಾವಧಿಯಲ್ಲಿ ಪೂರ್ಣಗೊಳಿಸಬೇಕು. ಸ್ವಂತ ಸಂಪನ್ಮೂಲಗಳ ಬಳಕೆಯಿಂದ ಅಭಿವೃದ್ಧಿಗೆ ಕಾನೂನು ವಿಶ್ವವಿದ್ಯಾಲಯ ಮುಂದಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಬುಧವಾರ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕಾನೂನು ಶಾಲೆಯ ಆವರಣದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವಿವಿಧ ಕಟ್ಟಡಗಳ ಕಾಮಗಾರಿಗಳ ಶಂಕುಸ್ಥಾಪನೆಯನ್ನು ನೆರವೇರಿಸಿ ಅವರು ಮಾತನಾಡಿದರು.

ಕಾಮಗಾರಿಗಳನ್ನು ನೀಡಿದ ಕಾಲಾವಕಾಶದಲ್ಲಿ ಮುಕ್ತಾಯಗೊಳಿಸುವ ಸಾಮರ್ಥ್ಯ ಏಜೆನ್ಸಿಗಳಿಗೆ ಇದೆ. ಕಾಮಗಾರಿಗಳನ್ನು ಕೈಗೊಂಡ ಅಧಿಕಾರಿಗಳಿಗೆ ಯಾವುದೇ ರೀತಿಯ ತೊಂದರೆಗಳು, ಸಮಸ್ಯೆಗಳು ಉಂಟಾದರೆ ಕೂಡಲೇ ನನಗೆ ಅಥವಾ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಗಮನಕ್ಕೆ ತರಬೇಕು. ಕಾಮಗಾರಿಯಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದು ಅವರು ಸೂಚಿಸಿದರು.

ವಿಶ್ವವಿದ್ಯಾಲಯಕ್ಕೆ ಯಾವುದೇ ಹಣಕಾಸಿನ ತೊಂದರೆಯಿಲ್ಲ. ಸ್ವಂತ ಸಂಪನ್ಮೂಲಗಳ ಸ್ವಾವಲಂಬನೆ ನಿಧಿಯಿಂದ 80 ಕೋಟಿ ರೂ ವೆಚ್ಚದ ಕಾಮಗಾರಿಗಳನ್ನು ಕೈಗೊಂಡರೂ ಸಹ ಸುಮಾರು 50ರಿಂದ 60 ಕೋಟಿ ರೂ ಉಳಿಯಲಿದೆ. ಆದರ್ಶ ವಿಶ್ವವಿದ್ಯಾಲಯ ಮಾಡುವ ಗುರಿ ಹೊಂದಲಾಗಿದೆ. ಜಾಗದ ಬಗ್ಗೆ ಹಲವಾರು ರೀತಿಯ ಗೊಂದಲಗಳು ಉಂಟಾಗಿದ್ದು, ಪಾಲಿಕೆಯ ನಿಯೋಗ ಮುಖ್ಯಮಂತ್ರಿಗಳು, ಸಭಾಪತಿಗಳನ್ನು ಭೇಟಿ ಮಾಡಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಈಗಾಗಲೇ ವಿಶ್ವವಿದ್ಯಾಲಯದ ಆಡಳಿತ ಭವನ ಕಟ್ಟಡ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಎರಡು ಸ್ಲಾಬ್ ಕಾಮಗಾರಿಗಳು ಪೂರ್ಣಗೊಂಡಿವೆ. ಮಾಹಿತಿ ಕೊರತೆಯಿಂದ 20 ದಿನಗಳ ಕಾಮಗಾರಿ ವಿಳಂಬವಾಗಿದೆ. ಕಾಮಗಾರಿಯಲ್ಲಿ ವಿಳಂಬವಾದ ಅವಧಿಯನ್ನು ಸರಿಪಡಿಸಿಕೊಂಡು ಮೇ ತಿಂಗಳಲ್ಲಿ ಕಟ್ಟಡವನ್ನು ಮುಕ್ತಾಯಗೊಳಿಸಬೇಕು. ಜೂನ್ ತಿಂಗಳಲ್ಲಿ ಶೈಕ್ಷಣಿಕ ವರ್ಷವನ್ನು ಆಡಳಿತ ಭವನದಿಂದ ಆರಂಭಿಸಲು ಯೋಜಿಸಲಾಗಿದೆ ಎಂದು ಅವರು ವಿವರಿಸಿದರು. ಶಾಸಕ ಅರವಿಂದ ಚಂದ್ರಕಾಂತ ಬೆಲ್ಲದ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ, ಮಹಾಪೌರ ಜ್ಯೋತಿ ಪಾಟೀಲ, ಪಾಲಿಕೆಯ ವಿರೋಧ ಪಕ್ಷದ ನಾಯಕ ಇಮ್ರಾನ್ ಎಲಿಗಾರ, ಪಾಲಿಕೆ ಸದಸ್ಯೆ ನೀಲಮ್ಮ ಯಲ್ಲಪ್ಪ ಅರವಾಳದ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಪ್ರಧಾನ ಕಾರ್ಯದರ್ಶಿ ಭವಾನಿ ನೇರಳೆ, ವಿಶ್ವವಿದ್ಯಾಲಯದ ಆಡಳಿತ ಕುಲಸಚಿವೆ ಗೀತಾ ಕೌಲಗಿ, ಮೌಲ್ಯಮಾಪನ ಕುಲಸಚಿವೆ ಪ್ರೊ. ರತ್ನಾ ಆರ್.ಭರಮಗೌಡರ್, ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಅಧ್ಯಕ್ಷ ವಿ.ಡಿ. ಕಾಮರಡ್ಡಿ, ಚಿದಾನಂದ ಪಾಟೀಲ, ಸ್ಥಾನಿಕ ಅಭಿಯಂತರರಾದ ಅಶ್ವಥನಾರಾಯಣ ಎಂ.ಹೊನಕೇರಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಆರ್.ಎಂ. ಕುಲಕರ್ಣಿ ಸೇರಿದಂತೆ ಸಿಂಡಿಕೇಟ್ ಸದಸ್ಯರು, ವಿದ್ಯಾ ಪರಿಷತ್ತಿನ ಸದಸ್ಯರು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಸಿ.ಬಸವರಾಜು ಸ್ವಾಗತಿಸಿದರು.


### ಅರ್ಜಿದಾರರರನ್ನು ದಂಗುಬಡಿಸಿದ ಜನನ-ಮರಣ ನೋಂದಣಾಧಿಕಾರಿ

# ಅರ್ಜಿದಾರರ ಹೆಸರಿಗೇ ಮರಣ ಪ್ರಮಾಣಪತ್ರ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮರಣ ಪ್ರಮಾಣಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯ ಹೆಸರಿನಲ್ಲಿಯೇ ಮರಣ ಪ್ರಮಾಣಪತ್ರ ನೀಡಿ ಅರ್ಜಿದಾರರನ್ನು ದಂಗುಬಡಿಸಿದ ಘಟನೆ ಲಕ್ಷ್ಮೇಶ್ವರ ಪುರಸಭೆಯಲ್ಲಿ ನಡೆದಿದೆ.

ಘಟನೆಯ ವಿವರ: ಪಟ್ಟಣದ ದೇಸಾಯಿಬಣ ವ್ಯಾಪ್ತಿಯ ಅಶೋಕ ಮಹಾದೇವಪ್ಪ ಹಂಪಣ್ಣವರ ಎಂಬ ವ್ಯಕ್ತಿ 1-8-2024ರಂದು ಅನಾರೋಗ್ಯದಿಂದ ಮೃತಪಟ್ಟಿದ್ದರು. ಮೃತನ ಸಹೋದರ ನಾಗರಾಜ ಮಹದೇವಪ್ಪ ಹಂಪಣ್ಣವರ 9-8-2024ರಂದು ಸಹೋದರ ಅಶೋಕನ ಮರಣ ಪ್ರಮಾಣಪತ್ರಕ್ಕಾಗಿ ಪುರಸಭೆಯ ಜನನ-ಮರಣ ನೋಂದಣಿ ಅಧಿಕಾರಿಗೆ ಅರ್ಜಿ



Form - 6

ಕರ್ನಾಟಕ ಸರ್ಕಾರ
GOVERNMENT OF KARNATAKA
ಜನನ ಮತ್ತು ಮರಣಗಳ ಮುಖ್ಯ ನೋಂದಣಾಧಿಕಾರಿಗಳು
Chief Registrar of Births and Deaths
ಮರಣ ಪ್ರಮಾಣ ಪತ್ರ
DEATH CERTIFICATE
(Issued under Section 12/17 of the RBD Act, 1969 and Rule 8/13 of the KRBD Rules, 1999)

This is to certify that the following information has been taken from the original record of death which is the register for Lakshmeshwar (TMC) (village/town) of LAXMESHWAR taluk of Gadag district of Karnataka State

| | | | |
|---|---|---|---|
| Name | NAGARAJ HAMPANNAVAR | Sex | Male |
| Date of Death | 01/08/2024 | Place of Death | DESAYI BANA, Lakshmeshwar (TMC),LAXMESHWAR,Gadag,Karnataka |
| Name of Mother | TARAMATI | Name of the Father | MAHADEVAPPA HAMPANNAVAR |
| Name of the Husband/Wife | SUREKHA HAMPANNAVAR | | |
| Address of deceased at the time of death: | DESAYI BANA, Lakshmeshwar (TMC),LAXMESHWAR,Gadag,Karnataka | Permanent address of the deceased: | DESAYI BANA , Lakshmeshwar (TMC),LAXMESHWAR,Gadag,Karnataka |
| Registration No.: | 803081/T/D/2024/000181 | Date of Registration: | 17/08/2024 |
| Remarks(if any) | - | Date of Approval | 17/08/2024 |
| Signature of the issuing authority | | Address of the issuing authority | Health Inspector/Officer |

Digitally signed certificate, manual signature and seal is not required.

Lakshmeshwar (TMC), LAXMESHWAR Taluk, Gadag District

ಸಲ್ಲಿಸಿದ್ದರು. 7 ತಿಂಗಳ ನಂತರ 11-03-2025ರಂದು ನೋಂದಣಿ ಸಂಖ್ಯೆ 8038/ಟಿ/ಡಿ/2024/000181ರಲ್ಲಿ ಅಶೋಕನ ಮರಣ ದಾಖಲೆಯ ಬದಲಾಗಿ ಅರ್ಜಿ ಸಲ್ಲಿಸಿದ ಸಹೋದರ ನಾಗರಾಜನ ಹೆಸರಿನಲ್ಲಿಯೇ ಪ್ರಮಾಣಪತ್ರ ನೀಡಿ ಜೀವಂತ ಇದ್ದವರನ್ನೇ ಇಲ್ಲದಂತಾಗಿಸಿದ್ದಾರೆ.

ಇದೀಗ ಜೀವಂತ ವ್ಯಕ್ತಿಯ ಆಧಾರ್ ಕಾರ್ಡ್ ರದ್ದಾಗಿ ಸರ್ಕಾರದಿಂದ ಬರುವ ಎಲ್ಲ ಸವಲತ್ತುಗಳೂ ರದ್ದಾಗಿವೆ. ನಿತ್ಯ ಕೂಲಿ ಮಾಡಿ ಬದುಕುವ ಈ ವ್ಯಕ್ತಿ ತನ್ನದಲ್ಲದ ತಪ್ಪಿಗೆ ಪರಿತಪಿಸುತ್ತಾ ಕಳೆದ 9 ತಿಂಗಳಿಂದ ಈ ತಪ್ಪನ್ನು ಸರಿಪಡಿಸಿಕೊಡುವಂತೆ ಕಚೇರಿಗೆ ಅಲೆಯುತ್ತ ಪರದಾಡುತ್ತಿದ್ದಾನೆ.

> ಪ್ರಮಾಣಪತ್ರದ ಪ್ರಮಾದ ಸರಿಪಡಿಸುವಂತೆ ಅರ್ಜಿದಾರರು ನಮಗೆ ವಿಷಯ ತಿಳಿಸಿದ್ದರು. ಆಗಲೇ ಅಧಿಕಾರಿ ಮಂಜುನಾಥ ಮುದಗಲ್ ಅವರಿಗೆ ಕಟ್ಟುನಿಟ್ಟಿನ ಸೂಚನೆ ಮತ್ತು ನೋಟೀಸ್ ನೀಡಿದ್ದು, ಅವರ ಮೇಲೆ ಸೂಕ್ತ ಕ್ರಮಕ್ಕೆ ಮೇಲಧಿಕಾರಿಗಳಿಗೆ ವರದಿ ಸಲ್ಲಿದಿದ್ದೇನೆ.
>
> **– ಮಾಹಾಂತೇಶ ಬೀಳಗಿ.**
> ಪುರಸಭೆ ಮುಖ್ಯಾಧಿಕಾರಿ.

ಪ್ರಮಾಣಪತ್ರದ ಪ್ರಮಾದ ಸರಿಪಡಿಸುವಂತೆ ನಿತ್ಯ ಪುರಸಭೆಗೆ ಅಲೆದರೂ ಜನನ-ಮರಣ ನೋಂದಣಿ ಕಾರ್ಯದ ಜವಾಬ್ದಾರಿ ನಿರ್ವಹಿಸುವ ಅಧಿಕಾರಿ ಮಂಜುನಾಥ ಮುದಗಲ್ ತಾವು ಮಾಡಿದ ತಪ್ಪನ್ನು ಮುಚ್ಚಿ ಹಾಕಲು ನೋಂದಣಿ ತಂತ್ರಾಂಶದಲ್ಲಿ ನಜರಚೂಕಿನಿಂದ ತಪ್ಪಾಗಿರುವ ದಾಖಲೆಗಳನ್ನು ಪರಿಶೀಲಿಸಿ ತಿದ್ದುಪಡಿ ಮಾಡುವಂತೆ ಲಕ್ಷ್ಮೇಶ್ವರ ತಹಸೀಲ್ದಾರ ಕಚೇರಿಗೆ ಕಳುಹಿಸಿ ಜವಾಬ್ದಾರಿಯಿಂದ ನುಣಚಿಕೊಂಡಿದ್ದಾರೆ.

ಈ ವಿಷಯ ಪತ್ರಕರ್ತರಿಗೆ ಗೊತ್ತಾಗಿದೆ ಎಂದು ಎಚ್ಚೆತ್ತುಕೊಂಡ ಅಧಿಕಾರಿ ಮರಣ ಪ್ರಮಾಣಪತ್ರ ರದ್ದುಪಡಿಸಲು ಬೆಂಗಳೂರಿನ ಕೇಂದ್ರ ಕಚೇರಿಗೆ ಹೋಗಿದ್ದಾರೆ ಎಂಬ ಮಾಹಿತಿ ತಿಳಿದು ಬಂದಿದೆ.

# 'ಜೀವನ ದರ್ಶನ' ಕಾರ್ಯಕ್ರಮ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ವಿವೇಕಾನಂದ ನಗರದ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ಜೀವನ ದರ್ಶನ 54ನೇ ಮಾಲಿಕೆ, ಕಾಶೀ ವಿಶ್ವನಾಥನ ಪಾಲಕಿ ಸೇವೆ ಕಾರ್ಯಕ್ರಮವನ್ನು ಡಿ. 19ರಂದು ಸಂಜೆ 6 ಗಂಟೆಗೆ ಏರ್ಪಡಿಸಿದೆ.

ಸಾನ್ನಿಧ್ಯವನ್ನು ಗದಗ ಶಿವಾನಂದ ಮಠದ ಪೂಜ್ಯ ಶಿವಶರಣೆ ಮುಕ್ತಾತಾಯಿ ಅವರು ವಹಿಸುವರು. ಅಧ್ಯಕ್ಷತೆಯನ್ನು ಶ್ರೀ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ ವಹಿಸುವರು. ಸಮಿತಿಯ ಗೌರವಾಧ್ಯಕ್ಷ ಜಿ.ಜಿ. ಕುಲಕರ್ಣಿ, ಉಪಾಧ್ಯಕ್ಷ ಆರ್.ಆರ್. ಕಾಶಪ್ಪನವರ ಉಪಸ್ಥಿತರಿರುವರು.

ಪ್ರಸಾದ ಸೇವೆಯನ್ನು ಗದಗ-ಬೆಟಗೇರಿ ನಗರಸಭೆಯ ನಿವೃತ್ತ ಪೌರಾಯುಕ್ತ ಜಗದೀಶಚಂದ್ರ ನಾಡಗೌಡ್ರ, ಗದುಗಿನ ನಿವೃತ್ತ ನೇತ್ರ ತಜ್ಞ ಡಾ. ಬಿ.ಜಿ. ಹಿರೇಮಠ, ಗದಗ ಎಸ್‌ಬಿಐ ನಿವೃತ್ತ ವ್ಯವಸ್ಥಾಪಕ ವೀರಣ್ಣ ಕೊಟಗಿ ವಹಿಸಿಕೊಂಡಿದ್ದಾರೆ.

ಕಲಾ ವಿಕಾಸ ಪರಿಷತ್ತಿನ ರೇಣುಕಾ ಶಂಕರಗೌಡ ಹಾಗೂ ಕಸ್ತೂರಿ ಕಮ್ಮಾರ ಮತ್ತು ಸಂಗಡಿಗರಿಂದ ಸಂಗೀತವಿದ್ದು, ಸಮಿತಿಯ ಕಾರ್ಯದರ್ಶಿ ಕೆ.ಪಿ. ಗುಳಗೌಡ್ರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

# ಅಪರಾಧ ತಡೆಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯ




**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅಪರಾಧಗಳನ್ನು ನಿಯಂತ್ರಿಸಿ ಸಮಾಜದಲ್ಲಿ ಶಾಂತಿ ಹಾಗೂ ಸುರಕ್ಷತೆ ಕಾಪಾಡುವ ಉದ್ದೇಶದಿಂದ ಪೊಲೀಸ್ ಇಲಾಖೆಯ ವತಿಯಿಂದ ಬುಧವಾರ ಪಟ್ಟಣದ ವಿವಿಧ ಕಡೆಗಳಲ್ಲಿ ಅಪರಾಧ ತಡೆ ಮಾಸಾಚರಣೆಯನ್ನು ಹಮ್ಮಿಕೊಂಡು ಜನರಲ್ಲಿ ಜಾಗೃತಿ ಮೂಡಿಸಲಾಯಿತು.

ಈವೇಳೆ ಎಎಸ್ಐ ಶೇಖರ ಹೊಸಳ್ಳಿ ಮಾತನಾಡಿ, ಅಪರಾಧ ತಡೆಗಟ್ಟುವುದು ಪೊಲೀಸ್ ಇಲಾಖೆಯ ಹೊಣೆಗಾರಿಕೆಯಷ್ಟೇ ಅಲ್ಲ, ಸಾರ್ವಜನಿಕರ ಸಹಕಾರವೂ ಅತ್ಯಂತ ಅಗತ್ಯ. ಅನುಮಾನಾಸ್ಪದ ಚಟುವಟಿಕೆಗಳು ಕಂಡುಬಂದಲ್ಲಿ ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಬೇಕು. ಕಾನೂನು ಪಾಲನೆಯಿಂದಲೇ ಸುರಕ್ಷಿತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಯುವಜನತೆ ತಪ್ಪು ದಾರಿಗೆ ಹೋಗದಂತೆ ಪಾಲಕರು, ಶಿಕ್ಷಕರು ಹಾಗೂ ಸಮಾಜ ಒಟ್ಟಾಗಿ ಜವಾಬ್ದಾರಿ ನಿರ್ವಹಿಸಬೇಕು. ಅಪರಾಧರಹಿತ ಸಮಾಜ ನಿರ್ಮಾಣ ಹಾಗೂ ಪೊಲೀಸ್-ಜನತೆಯ ನಡುವಿನ ವಿಶ್ವಾಸ ಬಲಪಡಿಸುವುದೇ ಈ ಮಾಸಾಚರಣೆಯ ಮುಖ್ಯ ಗುರಿಯಾಗಿದೆ ಎಂದರು.

ಪೊಲೀಸ್ ಪೇದೆ ಸಂತೋಷ ಘಾಟಗೆ ಮಾತನಾಡಿ, ಸೈಬರ್ ಅಪರಾಧವು ಅಂತರ್ಜಾಲ, ಕಂಪ್ಯೂಟರ್ ಹಾಗೂ ಮೊಬೈಲ್ ತಂತ್ರಜ್ಞಾನಗಳ ದುರುಪಯೋಗದಿಂದ ನಡೆಯುವ ಅಪರಾಧವಾಗಿದೆ. ಇತ್ತೀಚೆಗೆ ಆನ್‌ಲೈನ್ ವಂಚನೆ, ಬ್ಯಾಂಕ್ ಮೋಸ, ಗುರುತು ಕಳವು, ಸೋಶಿಯಲ್ ಮೀಡಿಯಾ ದೌರ್ಜನ್ಯ ಇವು ಸಾಮಾನ್ಯ. ಅಜ್ಞಾತ ಲಿಂಕ್‌ಗಳಿಗೆ ಕ್ಲಿಕ್ ಮಾಡದೆ, ಪಾಸ್‌ವರ್ಡ್ ರಕ್ಷಣೆ ಪಾಲಿಸುವುದು ಅತ್ಯವಶ್ಯವಾಗಿದೆ ಎಂದು ತಿಳಿಸಿ, ಮಹಿಳೆ ಮತ್ತು ಮಕ್ಕಳ ರಕ್ಷಣೆಯ ಅಗತ್ಯತೆ, ಕಳ್ಳತನ ತಡೆಗಟ್ಟುವ ಕ್ರಮಗಳು ಹಾಗೂ ತುರ್ತು ಸಹಾಯವಾಣಿ ಸಂಖ್ಯೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿದರು.

ಪಟ್ಟಣದ ಬಸ್ ನಿಲ್ದಾಣ, ಗಣೇಶ್ ಗುಡಿ, ವೀರಣ್ಣನ ಪಾದಗಟ್ಟಿ, ಆಟೋ ನಿಲ್ದಾಣ ಸೇರಿದಂತೆ ಹಲವು ಪ್ರಮುಖ ಸ್ಥಳಗಳಲ್ಲಿ ಸಾರ್ವಜನಿಕರಿಗೆ ಭಿತ್ತಿಪತ್ರಗಳನ್ನು ಹಂಚುವ ಮೂಲಕ ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮಗಳ ಕುರಿತು ಅರಿವು ಮೂಡಿಸಲಾಯಿತು.

### ಶಾಲಾ ಬಸ್‌ನ ಚಕ್ರದಡಿ ಸಿಲುಕಿ ಪ್ರಾಣ ಬಿಟ್ಟ 4 ವರ್ಷದ ಕಂದಮ್ಮ । ಬಸ್ ಚಾಲಕನ ಅಮಾನವೀಯ ವರ್ತನೆ

# ಮಗುವಿನ ಪ್ರಾಣ ತೆಗೆದ ಚಾಲಕನ ನಿರ್ಲಕ್ಷ್ಯ




ಇತ್ತೀಚಿನ ದಿನಗಳಲ್ಲಿ ಸರ್ಕಾರಿ ಶಾಲೆಗಳ ಬಲವರ್ಧನೆಯ ನಡುವೆಯೂ ಹೆಚ್ಚುತ್ತಿರುವ ಖಾಸಗಿ ಶಾಲೆಗಳು ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿಸಿಕೊಳ್ಳುವಲ್ಲಿ ಸ್ಪರ್ಧೆಗೆ ಬಿದ್ದಂತೆ ವರ್ತಿಸುತ್ತಿವೆ. ಶಾಲಾ ವಾಹನಗಳಲ್ಲಿ ನಿಯಮ ಮೀರಿ ಮಕ್ಕಳನ್ನು ಸಾಗಿಸಲಾಗುತ್ತಿದೆ. ಕೆಲ ಶಾಲೆಗಳ ಬಸ್ಸಿನ ಚಾಲಕರಿಗೆ ಲೈಸನ್ಸ್ ಕೂಡ ಇರುವುದಿಲ್ಲ. ಟ್ರ್ಯಾಕ್ಟರ್-ಟೆಂಪೋ ಓಡಿಸುವ ಚಾಲಕರು ಬಸ್ಸನ್ನು ಯರ್ರಾಬಿರ್ರಿ ಚಲಾಯಿಸುತ್ತಾರೆ. ದುಡ್ಡು ಮಾಡುವ ಧಾವಂತದಲ್ಲಿ ಮಕ್ಕಳ ಅಮೂಲ್ಯ ಜೀವದೊಂದಿಗೆ ಚೆಲ್ಲಾಟವಾಡುವ ಖಾಸಗಿ ಶಾಲೆಯ ಮೇಲೆ ಸಂಬಂಧಪಟ್ಟ ಅಧಿಕಾರಿಗಳು, ಆರ್‌ಟಿಓ ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕಿದೆ.

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಖಾಸಗಿ ಶಾಲೆಯ ಬಸ್ಸಿನ ಚಕ್ರಕ್ಕೆ ಸಿಲುಕಿ ಬಾಲಕನೋರ್ವ ಸ್ಥಳದಲ್ಲೇ ಸಾವನ್ನಪ್ಪಿದ ಹೃದಯ ವಿದ್ರಾವಕ ಘಟನೆ ಬುಧವಾರ ಲಕ್ಷ್ಮೇಶ್ವರ ಸಮೀಪದ ದೊಡ್ಡೂರ ಹತ್ತಿರ ನಡೆದಿದೆ. ದೊಡ್ಡೂರ ತಾಂಡಾದ ಎಲ್‌ಕೆಜಿ ಓದುತ್ತಿರುವ 4 ವರ್ಷದ ಪ್ರಥಮ ಅರುಣ ಲಮಾಣಿ ಮೃತಪಟ್ಟ ಬಾಲಕ.

ಘಟನೆಯ ವಿವರ: ತಾಲೂಕಿನ ಶಿಗ್ಲಿ ಹತ್ತಿರದ ಲಕ್ಷ್ಮೇಶ್ವರ ಮೂಲದ ಲಿಟಲ್ ಹಾರ್ಟ್ ಇಂಟರ್‌ನ್ಯಾಶನಲ್ ಶಾಲೆಯ ಬಸ್ ಬುಧವಾರ ಮಧ್ಯಾಹ್ನ ಶಾಲಾ ಅವಧಿಯ ನಂತರ ಗ್ರಾಮೀಣ ಭಾಗದ ವಿದ್ಯಾರ್ಥಿಗಳನ್ನು ಅವರ ಊರಿಗೆ ಬಿಟ್ಟು ಬರಲು ಹೊರಟಿತ್ತು. ಈ ವೇಳೆ ಚಾಲಕನ ಅತಿಯಾದ ವೇಗ, ನಿರ್ಲಕ್ಷ್ಯದಿಂದ ಶಾಲೆಯ ಎಲ್‌ಕೆಜಿ ವಿದ್ಯಾರ್ಥಿ ಬಸ್ಸಿನಿಂದ ಕೆಳಗೆ ಬಿದ್ದಿದ್ದಾನೆ. ಬಸ್ಸಿನ ಚಕ್ರಕ್ಕೆ ಸಿಲುಕಿದ ಪರಿಣಾಮ ಬಾಲಕ ಸ್ಥಳದಲ್ಲೇ ಮೃತಪಟ್ಟಿದ್ದಾನೆ. ಬಸ್ಸಿನಲ್ಲಿನ ಮಕ್ಕಳ ಚೀರಾಟ, ಆಕ್ರಂದನದಿಂದ ಬಸ್ ನಿಲ್ಲಿಸಿದ ಚಾಲಕ-ನಿರ್ವಾಹಕರಿಬ್ಬರೂ ಮೃತ ಬಾಲಕನನ್ನು ಬಸ್ಸಿನೊಳಗೆ ಹಾಕೊಕೊಂಡು ಊರ ಹೊರವಲಯದಲ್ಲಿ ಬಿಟ್ಟು ಬಿಟ್ಟು ಪರಾರಿಯಾಗಿದ್ದಾರೆ. ಮಕ್ಕಳ ಕೂಗಾಟ ಕೇಳಿದ ಸಾರ್ವಜನಿಕರು ವಿಷಯವನ್ನು ಪೊಲೀಸ್ ಠಾಣೆಗೆ ತಲುಪಿಸಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ಪಾಲಕರು, ತಾಂಡಾದ ನಿವಾಸಿಗಳು ಸ್ಥಳಕ್ಕೆ ದೌಡಾಯಿಸಿ ಮಗುವಿನ ಸ್ಥಿತಿ ಕಂಡು ನೆಲಕ್ಕೊರಗಿ ಎದೆ ಬಡಿದು-ಕೊಂಡು ಅತ್ತಿದ್ದಾರೆ. ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ತಂದೆ ರಜೆಯ ಮೇಲೆ ಊರಿನಲ್ಲಿದ್ದು, ಮಗನ ದುರಂತ ಅಂತ್ಯ ನೋಡಲೆಂದೇ ಬಂದಂತಾಗಿತ್ತು. ತಂದೆ-ತಾಯಿ, ಪಾಲಕರ ಆಕ್ರಂದನ ನೆರದವರ ಕಣ್ಣಲ್ಲಿ ನೀರು ತರಿಸಿತ್ತು. ಘಟನೆಯ ನಂತರ ಚಾಲಕರ, ಶಾಲೆಯವರ ನಿರ್ಲಕ್ಷ್ಯದ ವಿರುದ್ಧ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು. ಘಟನೆಯ ಕುರಿತು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## 1 ಲಕ್ಷ ರೂಪಾಯಿ ಸಾಲ 74 ಲಕ್ಷ ರೂಪಾಯಿಗೆ ಏರಿಕೆ, ಸಾಲ ತೀರಿಸಲು ಕಿಡ್ನಿ ಮಾರಿದ ರೈತ

■ವಿಜಯಸಾಕ್ಷಿ ಸುದ್ದಿ, ಮುಂಬೈ



ಅಕ್ರಮವಾಗಿ ಸಾಲ ನೀಡುವವರಿಂದ 1 ಲಕ್ಷ ಸಾಲ ಪಡೆದಿದ್ದು, ಅದಕ್ಕೆ ಹೆಚ್ಚಿನ ದಿನದ ಬಡ್ಡಿ ಸೇರಿ 75 ಲಕ್ಷ ಸಾಲ ಏರಿಕೆಯಾದ ಕಾರಣ ವ್ಯಕ್ತಿಯೊಬ್ಬ ತನ್ನ ಕಿಡ್ನಿಯನ್ನೇ ಮಾರಾಟ ಮಾಡಿರುವ ಘಟನೆ ಮಹಾರಾಷ್ಟ್ರದಲ್ಲಿ ನಡೆದಿದೆ.

ಮಹಾರಾಷ್ಟ್ರದ ರೋಷನ್ ಸದಾಶಿವ್ ಕುಡೆ ಎನ್ನುವ ರೈತನೊಬ್ಬ ಕಾಂಬೋಡಿಯಾಕ್ಕೆ ಹೋಗಿ ತನ್ನ ಮೂತ್ರಪಿಂಡವನ್ನು ಮಾರಾಟ ಮಾಡಿದ್ದಾರೆ.

ರೋಷನ್ ಸದಾಶಿವ್ ಕುಡೆ ಅವರು ಹಿಂದೆ ಅಕ್ರಮ ಸಾಲಧಾತರಿಂದ ಒಂದು ಲಕ್ಷ ರೂಪಾಯಿ ಸಾಲ ಪಡೆದಿದ್ದರು. ದಿನಕ್ಕೆ ಹತ್ತು ಸಾವಿರ ರೂಪಾಯಿ ಬಡ್ಡಿ ಬಂದಿದ್ದರಿಂದ ಅವನ ಸಾಲ 74 ಲಕ್ಷ ರೂಪಾಯಿಗಳಿಗೆ ಏರಿತು.

ಚಂದ್ರಾಪುರ ಜಿಲ್ಲೆಯ ರೈತ ರೋಷನ್ ಸದಾಶಿವ್ ಕುಡೆ ಕೃಷಿಯಲ್ಲಿ ನಿರಂತರ ನಷ್ಟವನ್ನು ಅನುಭವಿಸುತ್ತಿದ್ದರು ಮತ್ತು ಡೈರಿ ವ್ಯವಹಾರವನ್ನು ಪ್ರಾರಂಭಿಸಲು ನಿರ್ಧರಿಸಿದರು. ಅವರು ಹಲವಾರು ಲೇವಾದೇವಿಗಾರರಿಂದ 1 ಲಕ್ಷ ರೂ.ಗಳ ಸಂಚಿತ ಸಾಲವನ್ನು ಪಡೆದಿದ್ದರು.

ಹೈನುಗಾರಿಕೆ ವ್ಯವಹಾರ ಆರಂಭವಾಗುವ ಮೊದಲೇ, ಅವರು ಖರೀದಿಸಿದ ಹಸುಗಳು ಸತ್ತವು ಮತ್ತು ಅವರು ಹೊಂದಿದ್ದ ಜಮೀನಿನಲ್ಲಿ ಬೆಳೆಗಳು ವಿಫಲವಾದವು. ಸಾಲದ ಸುಳಿ ಬಿಗಿಯಾಗಲು ಪ್ರಾರಂಭಿಸಿತು ಮತ್ತು ಲೇವಾದೇವಿಗಾರರು ಕೂಡೆ ಮತ್ತು ಅವರ ಕುಟುಂಬಕ್ಕೆ ಕಿರುಕುಳ ನೀಡಲು ಪ್ರಾರಂಭಿಸಿದರು.

ನಂತರ ರೈತ ಸಾಲವನ್ನು ತೀರಿಸಲು ತನ್ನ ಭೂಮಿ, ಟ್ರ್ಯಾಕ್ಟರ್ ಮತ್ತು ಬೆಲೆಬಾಳುವ ಗೃಹೋಪಯೋಗಿ ವಸ್ತುಗಳನ್ನು ಮಾರಿದನು, ಆದರೆ ಅದು ಸಾಕಾಗಲಿಲ್ಲ. ಸಾಲ ಇನ್ನೂ ಉಳಿದಾಗ, ಒಬ್ಬ ಸಾಲಗಾರ ಕುಡೆಗೆ ತನ್ನ ಮೂತ್ರಪಿಂಡವನ್ನು ಮಾರಾಟ ಮಾಡಲು ಸಲಹೆ ನೀಡಿದನು. ಏಜೆಂಟ್ ಮೂಲಕ, ಅವನು ಕೋಲ್ಕತ್ತಾಗೆ ಹೋಗಿ, ಪರೀಕ್ಷೆಗಳಿಗೆ ಒಳಗಾದನು ಮತ್ತು ನಂತರ ಕಾಂಬೋಡಿಯಾಕ್ಕೆ ಹೋದನು, ಅಲ್ಲಿ ಅವನ ಮೂತ್ರಪಿಂಡವನ್ನು ತೆಗೆದು 8 ಲಕ್ಷ ರೂ.ಗೆ ಮಾರಾಟ ಮಾಡಲಾಯಿತು.

ದೂರು ನೀಡಿದರೂ ಪೊಲೀಸರು ಯಾವುದೇ ಕ್ರಮ ಕೈಗೊಳ್ಳದ ಕಾರಣ ಅವರ ಮಾನಸಿಕ ಮತ್ತು ದೈಹಿಕ ನೋವು ಹೆಚ್ಚಾಗಿದೆ ಎಂದು ಕುಡೆ ಹೇಳಿದ್ದಾರೆ. ನ್ಯಾಯ ಸಿಗದಿದ್ದರೆ, ರಾಜ್ಯ ಸರ್ಕಾರದ ಪ್ರಧಾನ ಕಚೇರಿಯ ಮುಂದೆ ತಾವು ಮತ್ತು ತಮ್ಮ ಕುಟುಂಬ ಆತ್ಮಾಹುತಿ ಮಾಡಿಕೊಳ್ಳುವುದಾಗಿ ಅವರು ಈಗ ಹೇಳಿದ್ದಾರೆ. ಸಾಲ ನೀಡಿದವರನ್ನು ಕಿಶೋರ್ ಬವಾಂಕುಲೆ, ಮನೀಶ್ ಕಲ್ಬಂಡೆ, ಲಕ್ಷ್ಮಣ್ ಉರ್ಕುಡೆ, ಪ್ರದೀಪ್ ಬವಾಂಕುಲೆ, ಸಂಜಯ್ ಬಲ್ಲಾರ್ಪುರೆ ಮತ್ತು ಲಕ್ಷ್ಮಣ್ ಬೋರ್ಕರ್ ಎಂದು ಗುರುತಿಸಲಾಗಿದ್ದು, ಎಲ್ಲರೂ ಬ್ರಹ್ಮಪುರಿ ಪಟ್ಟಣದ ನಿವಾಸಿಗಳು.

## ವೈದ್ಯೆಯ ಹಿಜಾಬ್ ಎಳೆದ ಬಿಹಾರ ಸಿಎಂ, ಅವಹೇಳನ ಮಾಡಿದ ಯುಪಿ ಸಚಿವನ ವಿರುದ್ಧ ದೂರು ದಾಖಲು

■ವಿಜಯಸಾಕ್ಷಿ ಸುದ್ದಿ, ಬಿಹಾರ

ವೈದ್ಯೆಯ ಹಿಜಾಬ್ ಎಳೆದ ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಈ ಘಟನೆಯ ಕುರಿತು ಮಾತನಾಡುವಾಗ ಮಹಿಳೆಯನ್ನು ಅವಮಾನಿಸಿದ ಉತ್ತರ ಪ್ರದೇಶದ ಸಂಪುಟ ಸಚಿವ ಸಂಜಯ್ ನಿಶಾದ್ ವಿರುದ್ಧ ಲಕ್ನೋದ ಕೈಸರ್‌ಬಾಗ್ ಪೊಲೀಸ್ ಠಾಣೆಯಲ್ಲಿ ಬುಧವಾರ (ಡಿ.17) ದೂರು ದಾಖಲಿಸಲಾಗಿದೆ.

ಸಮಾಜವಾದಿ ಪಕ್ಷ (ಎಸ್‌ಪಿ)ದ ನಾಯಕಿ ಸುಮಯ್ಯಾ ರಾಣಾ ತನ್ನ ವಕೀಲರ ಜೊತೆ ಠಾಣೆಗೆ ತೆರಳಿ ದೂರು ನೀಡಿದ್ದು, ಇಬ್ಬರ ವಿರುದ್ಧವೂ ಎಫ್‌ಐಆರ್ ದಾಖಲಿಸಿ ಕ್ರಮ ಕೈಗೊಳ್ಳಲು ಮನವಿ ಮಾಡಿದ್ದಾರೆ. ಆಯುಷ್ ವೈದ್ಯೆಯಾಗಿ ಆಯ್ಕೆಗೊಂಡ ಮುಸ್ಲಿಂ ಮಹಿಳೆಗೆ ನೇಮಕಾತಿ ಪತ್ರ ವಿತರಿಸುವಾಗ ಬಿಹಾರ ಸಿಎಂ ನಿತೀಶ್ ಕುಮಾರ್ ಆಕೆಯ ಹಿಜಾಬ್ ಎಳೆದಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಭಾರೀ ಆಕ್ರೋಶ ವ್ಯಕ್ತವಾಗಿದೆ.

ತಾಲೂಕಾ ದೈವಜ್ಞ ಬ್ರಾಹ್ಮಣ ಸಮಾಜ ಸಂಘದ ವತಿಯಿಂದ 'ದೈವಜ್ಞ ದರ್ಶನ' ಕಾರ್ಯಕ್ರಮ

# ಸಮಾಜ, ಧರ್ಮದ ಕಾರ್ಯಕ್ಕಾಗಿ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಇತ್ತೀಚಿನ ದಿನಗಳಲ್ಲಿ ಎಲ್ಲರಲ್ಲಿ ಭೌತಿಕ ಶ್ರೀಮಂತಿಕೆ ಹೆಚ್ಚುತ್ತಿದೆ. ಆದರೆ, ಸಂಸ್ಕಾರ, ಸಂಸ್ಕೃತಿ, ಆಚಾರ-ವಿಚಾರ, ಸಂಪ್ರದಾಯ, ಮಾನವೀಯ ಮೌಲ್ಯಗಳು ಕಡಿಮೆಯಾಗುತ್ತಿವೆ ಎಂದು ಕರ್ಕಿಯ ದೈವಜ್ಞ ಬ್ರಾಹ್ಮಣ ಮಠಾಧೀಶ ಸಚ್ಚಿದಾನಂದ ಜ್ಞಾನೇಶ್ವರ ಭಾರತಿ ಸ್ವಾಮಿಗಳು ಹೇಳಿದರು.

ಅವರು ಪಟ್ಟಣದ ಶ್ರೀ ಶಂಕರಭಾರತಿ ಸಮುದಾಯ ಭವನದಲ್ಲಿ ತಾಲೂಕಾ ದೈವಜ್ಞ ಬ್ರಾಹ್ಮಣ ಸಮಾಜ ಸಂಘದ ವತಿಯಿಂದ ಬುಧವಾರ ಹಮ್ಮಿಕೊಂಡ 'ದೈವಜ್ಞ ದರ್ಶನ' ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಿಂದಿನ ದಿನಗಳಲ್ಲಿ ಬಡತನ, ಕಷ್ಟಗಳ ಮಧ್ಯೆ ನಮ್ಮ ಸಂಸ್ಕೃತಿ, ಆಚಾರ-ವಿಚಾರಗಳೊಂದಿಗೆ ಬದುಕುತ್ತಾ ಶಾಂತಿ, ನೆಮ್ಮದಿ ಕಂಡುಕೊಳ್ಳುತ್ತಿದ್ದರು. ಇಂದು ಆ ವಾತಾವರಣಕ್ಕಾಗಿ ಹಂಬಲಿಸಬೇಕಾಗಿದೆ. ನಮ್ಮ ವೈಯಕ್ತಿಯ ಬದುಕಿನ ನಡುವೆಯೂ ಪ್ರತಿಯೊಬ್ಬರೂ ಸಮಾಜದ ಶ್ರೇಯೋಭಿವೃದ್ಧಿ ಮತ್ತು ಧರ್ಮದ ಕಾರ್ಯಕ್ಕಾಗಿ ಕೈ ಜೋಡಿಸಬೇಕು. ದೈವಜ್ಞ ದರ್ಶನ ಕಾರ್ಯಕ್ರಮ ರಾಜ್ಯಾದ್ಯಂತ ನಡೆಯುತ್ತಿದ್ದು, ದೈವಜ್ಞ ಸಮಾಜ ಬಾಂಧವರು ಶ್ರೀಮಠದ ಉತ್ತರಾಧಿಕಾರಿಯಾದ ಶ್ರೀ ಸುಜ್ಞಾನೇಶ್ವರ ಭಾರತಿ ಸ್ವಾಮಿಗಳ ಪರಿಚಯ ಮತ್ತು ಸಮಾಜ ಸಂಘಟನೆ ಮಾಡಬೇಕು ಎಂದರು ನುಡಿದರು.

ಕಿರಿಯ ಶ್ರೀ ಸುಜ್ಞಾನೇಶ್ವರ ಭಾರತೀ ಸ್ವಾಮೀಜಿ ಆಶೀರ್ವಚನ ನೀಡಿ, ಭಕ್ತಿಯಿಂದ ಭಗವಂತನ ಆರಾಧನೆ, ಸ್ಮರಣೆ, ಧ್ಯಾನ ಮಾಡಿದರೆ ಸಾಕು ಭಗವಂತ ಎಲ್ಲರಿಗೂ ಒಲಿಯುತ್ತಾನೆ. ಇನ್ನೊಬ್ಬರನ್ನು ವಂಚಿಸಿ ತಂದ ಹಣದಿಂದ ದೇವರಿಗೆ ಅರ್ಪಿಸಿದರೆ ದೇವರು ಒಲಿಯುವುದಿಲ್ಲ. ಸಮಾಜದ ಪ್ರತಿ ಕುಟುಂಬದ ಮಕ್ಕಳು ಸಂಸ್ಕಾರವಂತರಾಗಬೇಕು. ನಾವಿಂದು ಮೂಲ ಆಚಾರ, ವಿಚಾರ, ಸಂಸ್ಕಾರದಿಂದ ದೂರವಾಗುತ್ತಿದ್ದೇವೆ ಎಂದು ನುಡಿದರು.

> ಹೆಸರಿಂದ ಮಾತ್ರ ಶ್ರೇಷ್ಠನಾದರೆ ಸಾಲದು. ನಮ್ಮ ಕರ್ತವ್ಯದಲ್ಲಿ, ನಮ್ಮ ವಿಚಾರದಲ್ಲಿ, ನಮ್ಮ ಮನಸ್ಥಿತಿಯಲ್ಲಿ ಕೂಡ ಶ್ರೇಷ್ಠರಾಗಬೇಕು. ಲಕ್ಷ್ಮೇಶ್ವರ ಭಾಗದಲ್ಲಿ ದೈವಜ್ಞ ಸಮಾಜ ಬಾಂಧವರು ಇಂತಹ ಧಾರ್ಮಿಕ ಕಾರ್ಯಗಳಿಗೆ ಒಗ್ಗಟ್ಟಾಗಿ, ಅಚ್ಚುಕಟ್ಟಾಗಿ ಸಹಕಾರ ನೀಡಿ ಕಾರ್ಯಕ್ರಮ ಮಾಡುತ್ತಿರುವದು ಒಳ್ಳೆಯ ಬೆಳವಣಿಗೆಯಾಗಿದೆ ಎಂದು ಕಿರಿಯ ಶ್ರೀ ಸುಜ್ಞಾನೇಶ್ವರ ಭಾರತೀ ಸ್ವಾಮೀಜಿ ನುಡಿದರು.

ದೈವಜ್ಞ ಬ್ರಾಹ್ಮಣ ಸಮಾಜದ ಅಧ್ಯಕ್ಷ ರಾಮರಾವ್ ವೇರ್ಣೇಕರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಹನುಮಂತ ಪುತಳೀಕರ, ಮಂಗಳೂರಿನ ಗಜೇಂದ್ರ ಶೇಠ, ಮಾರುತಿ ವೇರ್ಣೇಕರ, ವೆಂಕಟೇಶ ರಾಯಕರ, ರವಿರಾಜ ವೇರ್ಣೇಕರ, ಕೆ.ಸುಧಾಕರ ಶೇಟ್, ರಾಜ್ಯ ಆಯುಷ್ ಇಲಾಖೆ ವೈದ್ಯಾಧಿಕಾರಿಗಳ ಸಂಘದ ಅಧ್ಯಕ್ಷ ಡಾ. ರಾಜು ಶೇಟ್, ಅರುಣ ವೇರ್ಣೇಕರ, ಗಣೇಶ ಕುರಡೇಕರ, ಮೋಹನ ವೇರ್ಣೇಕರ, ಸುರೇಶ ವೇರ್ಣೇಕರ, ಚಂದ್ರಕಾಂತ ಶೇಟ್, ಈಶ್ವರ ಪುಥಳಿಕರ, ನಾರಾಯಣ, ರಾಘವೇಂದ್ರ ಶೇಟ್, ವಾದಿರಾಜ ಶೇಟ್, ಮೋಹನ್ ಕುರುಡೇಕರ, ಸುರೇಶ ಕುರುಡೇಕರ, ಸುರೇಶ ವೇರ್ಣೇಕರ, ವೆಂಕಟೇಶ ವೇರ್ಣೇಕರ, ಪ್ರಶಾಂತ ಕುಡಾಳಕರ, ಸುಜಾತಾ ಶೇಟ್, ವೆಂಕಟೇಶ ದೈವಜ್ಞ, ಪ್ರಕಾಶ ರೇವಣಕರ, ವಿಷ್ಣು ಕುರುಡೇಕರ ಸೇರಿದಂತೆ ಅನೇಕರಿದ್ದರು. ಪ್ರೇಮ ಶೇಟ್ ನಿರೂಪಿಸಿದರು.

## ಬುರ್ಖಾ ಧರಿಸದ ಕಾರಣಕ್ಕೆ ಪತ್ನಿ-ಮಕ್ಕಳ ಕೊಲೆ; ಮನೆಯೊಳಗೆ ಹೂತುಹಾಕಿದ ವ್ಯಕ್ತಿ



■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಶಾಮ್ಲಿ ಜಿಲ್ಲೆಯಲ್ಲಿ ಘೋರ ಘಟನೆಯಿಂದು ವರದಿಯಾಗಿದೆ, ತನ್ನ ಪತ್ನಿ ಮತ್ತು ಇಬ್ಬರು ಅಪ್ರಾಪ್ತ ಹೆಣ್ಣುಮಕ್ಕಳನ್ನು ತ್ರಿವಳಿ ಕೊಲೆ ಮಾಡಿದ ಆರೋಪದ ಮೇಲೆ ಪೊಲೀಸರು ವ್ಯಕ್ತಿಯನ್ನು ಬಂಧಿಸಿದ್ದಾರೆ. ಆರೋಪಿ ಫಾರೂಕ್ ಎಂದು ಗುರುತಿಸಲಾಗಿದ್ದು, ಗರ್ಹಿ ಗ್ರಾಮದ ತನ್ನ ಮನೆಯೊಳಗೆ ಏಳು ಅಡಿ ಆಳದ ಗುಂಡಿಯಲ್ಲಿ ಪತ್ನಿ ಮತ್ತು ಮಕ್ಕಳನ್ನು ಕೊಂದು ಅವರ ಶವಗಳನ್ನು ಹೂತು ಹಾಕಲಾಗಿದೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಮೃತರನ್ನು 32 ವರ್ಷದ ತಾಹಿರಾ ಮತ್ತು ಆಕೆಯ ಇಬ್ಬರು ಹೆಣ್ಣುಮಕ್ಕಳಾದ ಅಫ್ರೀನ್ (14) ಮತ್ತು ಸೆಹ್ರೀಮ್ (7) ಎಂದು ಗುರುತಿಸಲಾಗಿದೆ.

ಪೊಲೀಸ್ ತನಿಖೆಯಲ್ಲಿ ಕೊಲೆಗಳ ಹಿಂದಿನ ಉದ್ದೇಶ ಬಹಿರಂಗವಾಗಿದೆ. ಅಧಿಕಾರಿಗಳ ಪ್ರಕಾರ, ಫಾರೂಕ್ ತನ್ನ ಪತ್ನಿ ಇತ್ತೀಚೆಗೆ ಬುರ್ಖಾ ಧರಿಸದೆ ತನ್ನ ಹೆತ್ತವರ ಮನೆಗೆ ಭೇಟಿ ನೀಡಿದ್ದಕ್ಕಾಗಿ ಕೋಪಗೊಂಡಿದ್ದ. ವಿಚಾರಣೆಯ ಸಮಯದಲ್ಲಿ, ಆಕೆಯ ಕೃತ್ಯಗಳಿಂದಾಗಿ ಸಮಾಜದಲ್ಲಿ ಗೌರವ ಕಳೆದುಕೊಂಡಿದ್ದೇನೆ ಎಂದು ಭಾವಿಸಿದ್ದೇನೆ ಎಂದು ಆರೋಪಿ ಒಪ್ಪಿಕೊಂಡಿದ್ದಾನೆ.

ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಎನ್.ಪಿ. ಸಿಂಗ್ ಮಾತನಾಡಿ, ದಂಪತಿಗಳು ಹಣಕಾಸಿನ ತೊಂದರೆಗಳ ಬಗ್ಗೆ ಆಗಾಗ್ಗೆ ಜಗಳವಾಡುತ್ತಿದ್ದರು ಎಂದು ಹೇಳಿದ್ದಾರೆ. "ಅವರು ಆರ್ಥಿಕವಾಗಿ ಸಂಕಷ್ಟದಲ್ಲಿದ್ದಾರೆಂದು ನಮಗೆ ತಿಳಿಸಿದರು. ಅವರ ಪತ್ನಿ ಸ್ವಲ್ಪ ಹಣ ಕೇಳಿದ್ದರಿಂದ ಇಬ್ಬರೂ ಜಗಳವಾಡಿದರು ಎಂದು ಅವರು ಉಲ್ಲೇಖಿಸಿದರು. ಇದಾದ ನಂತರ, ಅವರು ಬುರ್ಖಾ ಧರಿಸದೆ ತಮ್ಮ ಹೆತ್ತವರ ಮನೆಗೆ ಹೋದರು. ಅವರ ಪತ್ನಿ ಹಿಂತಿರುಗಿದ ನಂತರ, ಅವರಿಗೆ ತನ್ನ ಬಗ್ಗೆ ಆಸಕ್ತಿ ಇಲ್ಲ ಎಂದು ಪತಿ ಭಾವಿಸಲು ಪ್ರಾರಂಭಿಸಿದರು. ಇದರಿಂದ ಆತ ಕೋಪಗೊಂಡಿದ್ದ. ಬಳಿಕ ಪತ್ನಿ ಮತ್ತು ಮಕ್ಕಳನ್ನು ಕೊಲ್ಲಲು ನಿರ್ಧರಿಸಿದ" ಎಂದು ಹೇಳಿದರು.

ಡಿಸೆಂಬರ್ 9 ಮತ್ತು 10 ರ ಮಧ್ಯರಾತ್ರಿ ಈ ಘಟನೆ ಸಂಭವಿಸಿದೆ. ಫಾರೂಕ್ ಶವಗಳನ್ನು ವಿಲೇವಾರಿ ಮಾಡಲು ಮೊದಲೇ ಯೋಜಿಸಿದ್ದ. ಕೊಲೆಗೂ ಮೊದಲೇ ಮನೆ ಅಂಗಳದಲ್ಲಿ ಆಳವಾದ ಗುಂಡಿ ಅಗೆದಿದ್ದ ಎಂದು ಅಧಿಕಾರಿಗಳು ವರದಿ ಮಾಡಿದ್ದಾರೆ.

## ದುಶ್ಚಟಗಳಿಂದ ದೂರವಿದ್ದರೆ ಘನತೆ ಹೆಚ್ಚುತ್ತದೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ದುಶ್ಚಟಗಳಿಂದ ದೂರ ಇದ್ದಲ್ಲಿ ಸಮಾಜದಲ್ಲಿ ಗೌರವ, ಘನತೆ ಸಿಗುತ್ತದೆ ಹಾಗೂ ಉತ್ತಮ ಜೀವನ ನಡೆಸಲು ಸಾಧ್ಯ ಎಂದು ಗೋಣಿಬಸಪ್ಪ ಕೊರ್ಲಹಳ್ಳಿ ಹೇಳಿದರು.

ಡಂಬಳ ವಲಯದಿಂದ ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್ ಮುಂಡರಗಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ನವಜೀವನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತೋಂಟಾದರ್ಯ ಮಠದ ಕಾರ್ಯದರ್ಶಿ ಜಿ.ವ್ಹಿ. ಹಿರೇಮಠ ಮಾತನಾಡಿ, ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ ಮೂಲಕ ದುಶ್ಚಟಗಳ ವಿರುದ್ಧ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಮಾಜಕ್ಕೆ ಉತ್ತಮ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು.

ಗದಗ ಜಿಲ್ಲಾ ಜನಜಾಗೃತಿ ವೇದಿಕೆ ಕೋಶಾಧಿಕಾರಿ ಎ.ಕೆ. ಮುಲ್ಲಾನವರ ಮಾತನಾಡಿ, ದುಶ್ಚಗಳನ್ನು ತ್ಯಜಿಸಿದರೆ ಮಾತ್ರ ಉತ್ತಮ ಜೀವನ ನಡೆಸಲು ಸಾಧ್ಯ ಎಂದು ಹೇಳಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ವಿಶಾಲಾ ಮಲ್ಲಾಪುರ ಯೋಜನೆಯ ಕಾರ್ಯಕ್ರಮಗಳ ಬಗ್ಗೆ ಪ್ರಸ್ತಾವಿಕವಾಗಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಭೀಮಪ್ಪ ಗದಗಿನ, ಮಂಜುನಾಥ್ ಸಂಜೀವಣ್ಣವರ, ಹುಲಗಪ್ಪ ಜೋಂಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಡಂಬಳ ಭಾಗದ ಮೇಲ್ವಿಚಾರಕ ಅಣ್ಣಪ್ಪ, ಸೇವಾ ಪ್ರತಿನಿಧಿಗಳು, ಒಕ್ಕೂಟದ ಪದಾಧಿಕಾರಿಗಳು ಇದ್ದರು.

## ರಾಜ್ಯದ ವಿವಿಧ ಕಾರಾಗೃಹಗಳಲ್ಲಿ ವಿಶೇಷ ಕಾರ್ಯಾಚರಣೆ: ಮೊಬೈಲ್ ಫೋನ್, ಗಾಂಜಾ ವಶ: ಡಿಜಿಪಿ ಅಲೋಕ್ ಕುಮಾರ್

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಕರ್ನಾಟಕದ ಕಾರಾಗೃಹಗಳಲ್ಲಿ 36 ಗಂಟೆಗಳ ಕಾಲ ನಡೆಸಿದ ವಿಶೇಷ ಕಾರ್ಯಾಚರಣೆಯಲ್ಲಿ ಮೊಬೈಲ್ ಫೋನ್‌ಗಳು, ಸಿಮ್ ಕಾರ್ಡ್‌ಗಳು, ಚಾಕುಗಳು ಮತ್ತು ಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ತಿದ್ದುಪಡಿ ಸೌಲಭ್ಯಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಯಲು ಇಂತಹ ಕಾರ್ಯಾಚರಣೆಗಳನ್ನು ಮುಂದುವರಿಸುವುದಾಗಿ ಅಧಿಕಾರಿಗಳು ಪ್ರತಿಜ್ಞೆ ಮಾಡಿದ್ದಾರೆ ಎಂದು ಕರ್ನಾಟಕ ಪೊಲೀಸ್ ಮಹಾನಿರ್ದೇಶಕ (ಕಾರಾಗೃಹ) ಅಲೋಕ್ ಕುಮಾರ್ ಬುಧವಾರ ತಿಳಿಸಿದ್ದಾರೆ.

ಬೆಂಗಳೂರಿನ ಜೈಲಿನಿಂದ ಆರು ಮೊಬೈಲ್ ಫೋನ್‌ಗಳು ಮತ್ತು ನಾಲ್ಕು ಚಾಕುಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಮೈಸೂರು ಜೈಲಿನಿಂದ ಒಂಬತ್ತು ಮೊಬೈಲ್ ಫೋನ್‌ಗಳು ಮತ್ತು 11 ಸಿಮ್ ಕಾರ್ಡ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದ್ದಾರೆ.

"ಬೆಳಗಾವಿ ಜೈಲಿನಲ್ಲಿ ನಾಲ್ಕು ಮೊಬೈಲ್ ಫೋನ್‌ಗಳು ಮತ್ತು 366 ಗ್ರಾಂ ಗಾಂಜಾ (ಹೊರಗಿನಿಂದ ಎಸೆದದ್ದು) ವಶಪಡಿಸಿಕೊಳ್ಳಲಾಗಿದೆ. ಮಂಗಳೂರು ಜೈಲಿನಿಂದ ನಾಲ್ಕು ಮೊಬೈಲ್ ಫೋನ್‌ಗಳು ಮತ್ತು ವಿಜಯಪುರ ಜೈಲಿನಿಂದ ಒಂದು ಮೊಬೈಲ್ ಫೋನ್ ಅನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಅವರು 'ಎಕ್ಸ್' ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಜೈಲುಗಳೊಳಗಿನ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಯಲು ಇಂತಹ ವಿಶೇಷ ಕಾರ್ಯಾಚರಣೆಗಳು ಮುಂದುವರಿಯುತ್ತವೆ ಎಂದು ಕುಮಾರ್ ಹೇಳಿದರು.

# ನ್ಯಾಷನಲ್ ಹೆರಾಲ್ಡ್ ಪ್ರಕರಣ : ಮೋದಿ, ಅಮಿತ್ ಶಾ ರಾಜೀನಾಮೆಗೆ ಖರ್ಗೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಜಾರಿ ನಿರ್ದೇನಾಲಯ (ಇಡಿ) ದಾಖಲಿಸಿದ್ದ ಹಣ ಅಕ್ರಮ ವರ್ಗಾವಣೆ (ಪಿಎಂಎಲ್‌ಎ) ದೂರು ಸ್ವೀಕರಿಸಲು ದೆಹಲಿ ನ್ಯಾಯಾಲಯ ನಿರಾಕರಿಸಿರುವುದನ್ನು ಕಾಂಗ್ರೆಸ್ ಸ್ವಾಗತಿಸಿದೆ.

ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ರಾಜಕೀಯ ಕಾರಣಕ್ಕೆ ನಮ್ಮ ನಾಯಕರ ಮೇಲೆ ಪ್ರಕರಣ ದಾಖಲಿಸಿದೆ ಎಂಬ ನಮ್ಮ ದೀರ್ಘ ಸಮಯದ ಆರೋಪವನ್ನು ನ್ಯಾಯಾಲಯದ ಆದೇಶ ಪುಷ್ಠೀಕರಿಸಿದೆ ಎಂದು ಕಾಂಗ್ರೆಸ್ ನಾಯಕರು ಹೇಳಿದ್ದಾರೆ.

ನಿನ್ನೆ (ಡಿ.16 ಮಂಗಳವಾರ) ದೆಹಲಿಯ ರೋಸ್ ಅವೆನ್ಯೂ ವಿಚಾರಣಾ ನ್ಯಾಯಾಲಯ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಪರ ಆದೇಶ ನೀಡಿದೆ. ಈ ಹಿನ್ನೆಲೆ, ಕೇಂದ್ರದ ಬಿಜೆಪಿ ಸರ್ಕಾರದ ವಿರುದ್ಧ ಇಂದು (ಡಿ.17 ಬುಧವಾರ) ಕಾಂಗ್ರೆಸ್ ದೇಶದ ವಿವಿದೆಡೆ ಪ್ರತಿಭಟನೆ ನಡೆಸಿದರು.

ದೆಹಲಿಯಲ್ಲಿ ಕರೆದಿದ್ದ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ನಡೆಸಿ ಮಾತನಾಡಿದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, "ನ್ಯಾಷನಲ್ ಹೆರಾಲ್ಡ್ ಪ್ರಕರಣದ ಉದ್ದೇಶ ಗಾಂಧಿ ಕುಟುಂಬಕ್ಕೆ ಕಿರುಕುಳ ಕೊಡುವುದು ಮತ್ತು ವಿಪಕ್ಷಗಳನ್ನು ಗುರಿಯಾಗಿಸುವುದು" ಎಂದರು.

"ಇದು ಸೇಡಿನ ಪ್ರಕರಣವಾಗಿದೆ. ನ್ಯಾಯಾಲಯದ ತೀರ್ಪನ್ನು ನಾವು ಸ್ವಾಗತಿಸುತ್ತೇವೆ. ಸತ್ಯಕ್ಕೆ ಯಾವಾಗಲೂ ಜಯವಾಗುತ್ತದೆ" ಎಂದು ಹೇಳಿದರು.

"ನ್ಯಾಯಾಲಯದ ತೀರ್ಪಿನ ಹಿನ್ನೆಲೆ, ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಕಾರಣ, ತೀರ್ಪು ಅವರಿಗೆ ಕಪಾಳಮೋಕ್ಷವಾಗಿದೆ. ಅವರು ರಾಜೀನಾಮೆ ನೀಡಬೇಕು ಮತ್ತು ಈ ರೀತಿ ಜನರಿಗೆ ಕಿರುಕುಳ ಕೊಡುವುದನ್ನು ನಿಲ್ಲಿಸಬೇಕು. ಈ ರೀತಿ ನಡೆದುಕೊಂಡರೆ ಜನರು ಅದನ್ನು ಒಪ್ಪುವುದಿಲ್ಲ ಎಂಬುವುದನ್ನು ಅವರನ್ನು ತಿಳಿದುಕೊಳ್ಳಬೇಕು. ಕೇಂದ್ರ ತನಿಖಾ ಸಂಸ್ಥೆಗಳನ್ನು ಅವರು ರಾಜಕೀಯ ಉದ್ದೇಶಕ್ಕೆ ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ" ಎಂದು ಖರ್ಗೆ ವಾಗ್ದಾಳಿ ನಡೆಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಿಕಾರ್ಜುನ ಖರ್ಗೆ ಜೊತೆ, ಕಾಂಗ್ರೆಸ್ ನಾಯಕರಾದ ಜೈರಾಮ್ ರಮೇಶ್, ಅಭಿಷೇಕ್ ಮನು ಸಿಂಘ್ವಿ, ಕೆ.ಸಿ ವೇಣುಗೋಪಾಲ್, ಪವನ್ ಖೇರಾ ಇದ್ದರು.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂಘಟನೆ) ಕೆ.ಸಿ. ವೇಣುಗೋಪಾಲ್ ಅವರು, ಸೇಡಿನ ರಾಜಕೀಯದ ಆರೋಪವನ್ನು ಪುನರುಚ್ಚರಿಸಿದರು. "ವಿರೋಧ ಪಕ್ಷಗಳನ್ನು ನಿರಂತರವಾಗಿ ಗುರಿಯಾಗಿಸಿಕೊಳ್ಳುವ ಬಿಜೆಪಿ ಸರ್ಕಾರದ ವಿರುದ್ದ ದೇಶದಾದ್ಯಂತ ನಮ್ಮ ಪಕ್ಷದ ಕಾರ್ಯಕರ್ತರು ಆಕ್ರೋಶಗೊಂಡಿದ್ದಾರೆ" ಎಂದು ಹೇಳಿದರು. "ನಾವು ಸೇಡಿನ ರಾಜಕೀಯವನ್ನು ಬಯಲು ಮಾಡುತ್ತೇವೆ. ಕಾಂಗ್ರೆಸ್ ಕಾರ್ಯಕರ್ತರು ಆಕ್ರೋಶಗೊಂಡಿದ್ದಾರೆ. ದೇಶದಾದ್ಯಂತ ಅವರು ತಮ್ಮ ಶಕ್ತಿ ಪ್ರದರ್ಶನ ಮಾಡಲಿದ್ದಾರೆ" ಎಂದು ತಿಳಿಸಿದರು.

ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಭಾಗಿಯಾಗಿದ್ದಾರೆ ಎನ್ನಲಾದ ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ)ದ ಹಣ ಅಕ್ರಮ ವರ್ಗಾವಣೆ ದೂರನ್ನು ಪರಿಗಣಿಸಲು ದೆಹಲಿ ನ್ಯಾಯಾಲಯ ಮಂಗಳವಾರ (ಡಿ. 16) ನಿರಾಕರಿಸಿದೆ.

ರೋಸ್ ಅವೆನ್ಯೂ ನ್ಯಾಯಾಲಯದ ವಿಶೇಷ ನ್ಯಾಯಾಧೀಶ ವಿಶಾಲ್ ಗೋಗ್ನೆ ಈ ಕುರಿತು ಆದೇಶ ಪ್ರಕಟಿಸಿದ್ದಾರೆ.

ಇಡಿ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ವಿರುದ್ಧ ಸಲ್ಲಿಸಿರುವ ಪ್ರಾಸಿಕ್ಯೂಷನ್ ದೂರು ಕಾನೂನುಬದ್ಧವಾಗಿಲ್ಲ. ಏಕೆಂದರೆ, ಅದು ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ನಿಗದಿತ ಅಪರಾಧಕ್ಕೆ ಸಂಬಂಧಿಸಿದ ಎಫ್‌ಐಆರ್ ಅನ್ನು ಆಧರಿಸಿಲ್ಲ ಎಂದು ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

ಹಣ ಅಕ್ರಮ ವರ್ಗಾವಣೆ ಪ್ರಕರಣದ ಪ್ರಕ್ರಿಯೆಗಳು ಸಂಜ್ಞೇ ಪರಿಗಣಿಸಿ ನಡೆಸಲಾಗಿದೆ ಮತ್ತು ಸಮನ್ಸ್ ಆದೇಶವನ್ನು ಡಾ. ಸುಬ್ರಮಣಿಯನ್ ಸ್ವಾಮಿ ಅವರು ಸಿಆರ್‌ಪಿಸಿ ಸೆಕ್ಷನ್ 200 ಅಡಿಯಲ್ಲಿ ಸಲ್ಲಿಸಿದ ಖಾಸಗಿ ದೂರಿನ ಮೇರೆಗೆ ನೀಡಲಾಗಿದೆಯೇ ಹೊರತು, ಎಫ್‌ಐಆರ್ ಮೇಲೆ ಅಲ್ಲ ಎಂದು ನ್ಯಾಯಾಲಯ ಹೇಳಿದೆ.

## ಎಥೆನಾಲ್ ಸ್ಥಾವರದ ವಿರುದ್ಧ ಪ್ರತಿಭಟನೆ: 40 ಜನರ ಬಂಧನ



■ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ

ರಾಜಸ್ಥಾನದ ಹನುಮಾನ್‌ಗಢ ಜಿಲ್ಲೆಯ ರೈತರು, ಪ್ರಸ್ತಾವಿತ ಎಥೆನಾಲ್ ಕಾರ್ಖಾನೆಯ ವಿರುದ್ಧ ಎರಡನೇ ದಿನವೂ ಪ್ರತಿಭಟನೆ ಮುಂದುವರೆಸಿದ್ದಾರೆ, ಈ ಪ್ರದೇಶದಲ್ಲಿ ಹೆಚ್ಚಿನ ಭದ್ರತೆ ಮತ್ತು ಇಂಟರ್ನೆಟ್ ಸೇವೆಗಳನ್ನು ಸ್ಥಗಿತಗೊಳಿಸಲಾಗಿದೆ.

ಗುರುವಾರ ಮುಂಜಾನೆ ಟಿಬ್ಬಿ ಬಳಿಯ ಗುರುದ್ವಾರದಲ್ಲಿ ರೈತರು ಜಮಾಯಿಸಲು ಪ್ರಾರಂಭಿಸಿದರು. ಆದರೆ ಸತತ ಎರಡನೇ ದಿನವೂ ಇಂಟರ್ನೆಟ್ ಸಂಪರ್ಕ ಸ್ಥಗಿತಗೊಂಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಹಿಂಸಾಚಾರದ ನಂತರ ಭಯದಿಂದಾಗಿ ಸ್ಥಾವರ ನಿರ್ಮಾಣ ಸ್ಥಳದ ಬಳಿ ವಾಸಿಸುವ ಸುಮಾರು 30 ಕುಟುಂಬಗಳು ತಾತ್ಕಾಲಿಕವಾಗಿ ಸ್ಥಳಾಂತರಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಬುಧವಾರ ರತಿಖೇಡಾ ಗ್ರಾಮದಲ್ಲಿ ಡ್ಯೂನ್ ಎಥೆನಾಲ್ ಪ್ರೈವೇಟ್ ಲಿಮಿಟೆಡ್ ನಿರ್ಮಾಣ ಸ್ಥಳಕ್ಕೆ ರೈತರ ದೊಡ್ಡ ಗುಂಪು ಪ್ರವೇಶಿಸಿದಾಗ ಪರಿಸ್ಥಿತಿ ಹದಗೆಟ್ಟಿತು. ಪ್ರತಿಭಟನಾಕಾರರು ಗಡಿ ಗೋಡೆಯ ಒಂದು ಭಾಗವನ್ನು ಹಾನಿಗೊಳಿಸಿದರು. ಸ್ಥಳದಲ್ಲಿ ಕಚೇರಿ ಮತ್ತು ಹಲವಾರು ವಾಹನಗಳಿಗೆ ಬೆಂಕಿ ಹಚ್ಚಿದರು.

### ಅನ್ನಭಾಗ್ಯ ಅಕ್ಕಿ ಸಾಗಾಟದ ಲಾರಿ, ಟಿಪ್ಪರ್, ರೈತರ ಟ್ರಾಕ್ಟರ್ ಬ್ಯಾಟರಿಗಳ ಕಳ್ಳತನ । ಗ್ರಾಮಸ್ಥರಲ್ಲಿ ಹೆಚ್ಚಿದ ಆತಂಕ

# ತಲೆನೋವು ತಂದಿಟ್ಟ ಕತ್ತಲ ಕಾರ್ಯಾಚರಣೆ!



■ವಿಜಯಸಾಕ್ಷಿ ಸುದ್ದಿ, ಡಂಬಳ

ಹೋಬಳಿಯ ಗ್ರಾಮಗಳಲ್ಲಿ ಕೃಷಿ ಬಳಕೆ ಯಂತ್ರಗಳು, ಪರಿಕರಗಳು, ಜಾನವಾರು ಕಳ್ಳತನ ಹೆಚ್ಚುತ್ತಿರುವುದು ರೈತರಲ್ಲಿ ಆತಂಕ ಮೂಡಿಸಿದೆ. ಇದೀಗ ಡಂಬಳ ಗ್ರಾಮದ ಬಿಓಐ ಬ್ಯಾಂಕ್ ಹತ್ತಿರ ನಿಲ್ಲಿಸಿದ್ದ 3 ಅನ್ನಭಾಗ್ಯ ಅಕ್ಕಿ ಸಾಗಾಟ ಲಾರಿಗಳ ಬ್ಯಾಟರಿ, ಒಂದು ಟಿಪ್ಪರ್, ಒಂದು ಟ್ರಾಕ್ಟರ್‌ನ ಬ್ಯಾಟರಿಗಳನ್ನು ರಾತ್ರಿ ಕಳ್ಳತನ ಮಾಡಲಾಗಿದೆ.

ಒಂದೇ ರಾತ್ರಿಯಲ್ಲಿ ಒಟ್ಟೂ 5 ವಾಹನಗಳ ಬ್ಯಾಟರಿ ಕಳ್ಳತನ ಮಾಡಿ ಕಳ್ಳರು ತಮ್ಮ ಕೈಚಳಕ ತೋರಿಸಿದ್ದು, ವಾಹನ ಚಾಲಕರು ಚಿಂತಿಸುವಂತಾಗಿದೆ. ಸಹಜವಾಗಿ ಲಾರಿ ಚಾಲಕರು ಎರಡು ವಾರದಲ್ಲಿ ಒಂದು ದಿನ ಡಂಬಳ ಗ್ರಾಮದಲ್ಲಿ ಇರುವ ತಮ್ಮ ಮನೆಗೆ ಹೋಗುಬೇಕೆನ್ನುವ ಕಾರಣಕ್ಕೆ ತಡರಾತ್ರಿ ಬ್ಯಾಂಕ್ ಮತ್ತು ಬಸ್ ನಿಲ್ದಾಣದ ಸಮೀಪ ಸರಕು ತುಂಬಿರುವ ಲಾರಿಯನ್ನು ನಿಲ್ಲಿಸಿ ಮನೆಗೆ ತೆರಳಿದ್ದರು. ಲಾರಿ ಚಾಲಕರು ಇಲ್ಲದೆ ಇರುವುದನ್ನು ಗಮನಿಸಿದ ಚಾಲಾಕಿ ಕಳ್ಳರು ಬ್ಯಾಟರಿಗಳನ್ನು ಕದ್ದೊಯ್ದಿದ್ದಾರೆ.

ರೈತರು ತಮ್ಮ ಮನೆಯ ಹತ್ತಿರ ಜಾಗದ ಕೊರತೆಯಿಂದ ರಸ್ತೆಯ ಪಕ್ಕ ಮತ್ತು ತಮ್ಮ ಜಮೀನಿನಲ್ಲಿ ಬೆಲೆಬಾಳುವ ಯಂತ್ರಗಳನ್ನು ಬಿಡುತ್ತಾರೆ. ನೀರಾವರಿ ಪೈಪ್‌ಗಳೂ ಹೊಲದಲ್ಲಿರುತ್ತವೆ. ಅಂಥವುಗಳನ್ನು ಕಳ್ಳರು ಸುಲಭವಾಗಿ ಕಳ್ಳತನ ಮಾಡುತ್ತಿದ್ದಾರೆ. ಆದರೆ ಕಳ್ಳರ ಪತ್ತೆಯಾಗದಿರುವುದು ರೈತರಿಗೆ ತಲೆನೋವು ತರಿಸಿದೆ. ಮುಂಡರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

ಡಂಬಳ ಗ್ರಾಮದ ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿಗಳ ಕೊರತೆಯಿದ್ದು, ಇಲ್ಲಿ ಪೊಲೀಸ್ ಸಿಬ್ಬಂದಿಗಳ ಸಂಖ್ಯೆಯನ್ನು ಹೆಚ್ಚಿಸಿ ರಾತ್ರಿ ಗಸ್ತು ಹಾಕಿಸಬೇಕು. ಗ್ರಾಮದ ಮುಖ್ಯ ಭಾಗಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಬೇಕು ಎಂದು ರೈತರು, ಗ್ರಾಮಸ್ಥರು, ಲಾರಿ ಚಾಲಕರು ಆಗ್ರಹಿಸಿದ್ದಾರೆ.

ಡಂಬಳ ಗ್ರಾಮದಲ್ಲಿ ಅನ್ನಭಾಗ್ಯ ಅಕ್ಕಿ ಸಾಗಿಸುವ 3 ಲಾರಿಗಳ ಬ್ಯಾಟರಿ, 1 ರೈತರ ಟ್ರಾಕ್ಟರ್, 1 ಟಿಪ್ಪರ್‌ಗೆ ಅಳವಡಿಸಿರುವ ಬ್ಯಾಟರಿಗಳು ಕಳ್ಳತನವಾಗಿರುವುದು ಬೆಳಕಿಗೆ ಬಂದಿದೆ. ಕಳ್ಳರನ್ನು ಪತ್ತೆ ಹಚ್ಚಲು ತಂಡವನ್ನು ರಚನೆ ಮಾಡಿದ್ದು, ಶೀಘ್ರದಲ್ಲಿಯೆ ಕಳ್ಳರನ್ನು ಹಿಡಿಯುತ್ತೇವೆ ಎಂದು ಮುಂಡರಗಿ ಸಿಪಿಐ ವಿಜಯಕುಮಾರ ಪ್ರತಿಕ್ರಿಯಿಸಿದ್ದಾರೆ.

> ಡಂಬಳ ಗ್ರಾಮದಲ್ಲಿ ಲಾರಿಗಳ ಬ್ಯಾಟರಿ ಅಷ್ಟೇ ಅಲ್ಲದೇ ಹೋಬಳಿಯಾದ್ಯಂತ ರಾತ್ರಿಯಾಗುತ್ತಿದ್ದಂತೆ ರೈತರ ಜಮೀನುಗಳಲ್ಲಿ ವಿದ್ಯುತ್ ತೆಗೆಯಲಾಗುತ್ತದೆ. ಇದರಿಂದ ಜಮೀನಿನಲ್ಲಿ ಇಟ್ಟಿರುವ ಬೆಲೆಬಾಳುವ ಕುಂಟೆ-ರಂಟೆ ಬಿತ್ತುವ ಯಂತ್ರಗಳು, ಡ್ರಿಪ್ ಪೈಪ್, ಬೋರ್‌ವೆಲ್‌ಗೆ ಅಳವಡಿಸಿರುವ ವೈರ್ ಕಳ್ಳತನದಿಂದಾಗಿ ರೈತರಲ್ಲಿ ಆತಂಕ ಹೆಚ್ಚಿದೆ. ಕಳ್ಳತನ ತಡೆಯಲು ಸರ್ಕಾರ ತಂಡ ರಚನೆ ಮಾಡುವ ಮೂಲಕ ರೈತರ ಹಿತ ಕಾಪಾಡಬೇಕು.
>
> **–ಕುಮಾರಸ್ವಾಮಿ ಹಿರೇಮಠ.**
> ಡಂಬಳ ಗ್ರಾಮದ ರೈತ.

> ಇತ್ತೀಚೆಗೆ ಟ್ರಾಕ್ಟರ್ ಬ್ಯಾಟರಿಯನ್ನು ಹೊಸದಾಗಿ ಖರೀದಿಸಿ ಅಳವಡಿಸಲಾಗಿತ್ತು. ಆದರೆ ರಾತ್ರಿ ಕಳ್ಳತನ ಮಾಡಲಾಗಿದೆ. ಪೊಲೀಸರು ಕಳ್ಳರ ಪತ್ತೆಗೆ ಶೀಘ್ರ ಕ್ರಮ ವಹಿಸಬೇಕು. ನಮ್ಮ ಗ್ರಾಮದಲ್ಲಿ ಬಹಳಷ್ಟು ರೈತರ ಕೃಷಿ ಪರಿಕರ ಕಳ್ಳತನವಾಗುತ್ತಿದೆ. ಗ್ರಾಮದ ಮುಖ್ಯ ರಸ್ತೆಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲು ಮುಂದಾಗಬೇಕು.
>
> **– ಎಮ್.ಎಸ್. ಯರಾಶಿ.**
> ಡಂಬಳ ಗ್ರಾಮದ ರೈತರು.

## ಗುರುವಂದನಾ, ಸ್ನೇಹ ಸಮ್ಮಿಲನ ಡಿ. 21ಕ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಾಲಲೀಲಾ ಮಹಾಂತ ಶಿವಯೋಗಿ ಶಿಕ್ಷಣ ಸಮೀತಿಯ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ 2002–03ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಂದ ಡಿ. 21ರಂದು ಬಾಲಲೀಲಾ ಮಹಾಂತ ಶಿವಯೋಗಿ ಕಲಾಭವನದಲ್ಲಿ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮ ನೆರವೇರಲಿದೆ.

ಬೆಳಿಗ್ಗೆ 8.30ಕ್ಕೆ ಗುರುವೃಂದವನ್ನು ಬಾಲಲೀಲಾ ಮಹಾಂತ ಶಿವಯೋಗಿ ಗವಿಮಠದಿಂದ ಕಲಾಭವನಕ್ಕೆ ಮೆರವಣಿಗೆ ಮೂಲಕ ಕರೆತರಲಾಗುವುದು. 10.30ಕ್ಕೆ ವೇದಿಕೆ ಕಾರ್ಯಕ್ರಮ ಜರುಗಲಿದ್ದು, ಸಾನ್ನಿಧ್ಯವನ್ನು ಧಾರವಾಡ ಮುರುಘಾಮಠ ಹಾಗೂ ಗವಿಮಠ ಮುಳಗುಂದದ ಮಲ್ಲಿಕಾರ್ಜುನ ಸ್ವಾಮೀಜಿ, ಸಮ್ಮುಖವನ್ನು ನೀಲಗುಂದದ ಗುದ್ನೇಶ್ವರ ಮಠದ ಪ್ರಭುಲಿಂಗದೇವರು, ಅಧ್ಯಕ್ಷತೆಯನ್ನು ಸಂಸ್ಥೆಯ ಚೇರಮನ್ ಎಂ.ಡಿ. ಬಟ್ಟೂರ ವಹಿಸುವರು. ಉದ್ಘಾಟಕರಾಗಿ ಶಿಕ್ಷಣ ಪ್ರೇಮಿಗಳಾದ ಗೌರಮ್ಮ ಬಡ್ನಿ, ಮುಖ್ಯ ಅಥಿತಿಗಳಾಗಿ ಡಾ. ಎಸ್.ಸಿ. ಚವಡಿ, ಎಂ.ಎಂ. ಬಡ್ನಿ, ಪಿ.ಎ. ವಂಟಕರ, ಎಂ.ಎಂ. ಅದರಗುಂಚಿ, ಎಫ್.ಎಸ್. ಅಮೋಘಿಮಠ, ಎಸ್.ಸಿ. ಕುರ್ತಕೋಟಿ, ಕಾಲೇಜಿನ ಪ್ರಾಚಾರ್ಯರಾದ ಎ.ಎಂ. ಅಂಗಡಿ, ಮುಖ್ಯೋಪಾಧ್ಯಾಯ ಇ.ಎಂ. ಗುಳೇದಗುಡ್ಡ ಹಾಗೂ ಇತರರು ಭಾಗವಹಿಸಲಿದ್ದಾರೆ.

ಈ ಸಂದರ್ಭದಲ್ಲಿ ಅಗಲಿದ ಶಿಕ್ಷಕರು ಹಾಗೂ ಅಗಲಿದ ಸ್ನೇಹಿತರುಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಲಾಗುವದು. ನಿವೃತ್ತ ಶಿಕ್ಷಕರು ಹಾಗೂ ಹಾಲಿ ಶಿಕ್ಷಕರು, ಸಿಬ್ಬಂದಿ ವರ್ಗದವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಬೆಳಗಾವಿಯ ಸರ್ದಾರ ಮೈದಾನದಲ್ಲಿ ರಾಷ್ಟ್ರೀಯ ಜೀವನೋಪಾಯ ಅಭಿಯಾನ, ಕರ್ನಾಟಕ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆ ಬೆಳಗಾವಿ ಇವರ ಸಹಯೋಗದೊಂದಿಗೆ ಆಯೋಜಿಸಿದ್ದ ನಮ್ಮ ಸರಸ ಮೇಳ-2025 ರಾಜ್ಯ ಮಟ್ಟದ ಸ್ವ-ಸಹಾಯ ಗುಂಪುಗಳ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದಲ್ಲಿ ಸ್ಥಾಪಿಸಲಾಗಿದ್ದ ಧಾರವಾಡ ಜಿಲ್ಲೆಯ ಮಳಿಗೆಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ ನೀಡಿದರು. ಈ ಸಂದರ್ಭದಲ್ಲಿ ಡೇನಲ್ಮ್ ಯೋಜನೆಯ ಅಭಿಯಾನ ವ್ಯವಸ್ಥಾಪಕ ಅಬ್ದುಲ್ ರಜಾಕ್ ಗಡವಾಲೆ ಉಪಸ್ಥಿತರಿದ್ದರು.

### ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಾಮೂಹಿಕ ವಿವಾಹಗಳ ಅರ್ಜಿ ಆಹ್ವಾನ

## ಅಲ್ಪಸಂಖ್ಯಾತರ ಸರಳ ವಿವಾಹಕ್ಕೆ ಪ್ರೋತ್ಸಾಹ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವತಿಯಿಂದ ಆರ್ಥಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತರ ಸಮುದಾಯದವರ ಸರಳ ವಿವಾಹಕ್ಕೆ ಪ್ರೋತ್ಸಾಹ ನೀಡಲು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುವ ಸಮೂಹ ವಿವಾಹಗಳ ವೆಚ್ಚಗಳಿಗಾಗಿ ಪ್ರತಿ ಜೊಡಿಗೆ 50 ಸಾವಿರ ರೂ ನೀಡಲಾಗುವುದು. ಸ್ವಯಂ ಸೇವಾ ಸಂಸ್ಥೆಗಳು https://mmdrsattendance.dom.karnataka.gov.in/Home/Login ಲಿಂಕ್‌ನಲ್ಲಿ ನೀಡಿರುವ Download Sarala Vivaha User Manual ಬಳಸಿಕೊಂಡು ಈ ಕೆಳಕಂಡ ಷರತ್ತುಗಳೊಂದಿಗೆ ಆನ್‌ಲೈನ್ ಅರ್ಜಿ ಸಲ್ಲಿಸಲು ಸೂಚಿಸಿದೆ.

ಅರ್ಜಿ ಸಲ್ಲಿಸುವ ವಧು-ವರರು ಕರ್ನಾಟಕ ರಾಜ್ಯಕ್ಕೆ ಸೇರಿದ ಅಲ್ಪಸಂಖ್ಯಾತರ ಸಮುದಾಯಗಳಿಗೆ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ) ಸೇರಿದವರಾಗಿರಬೇಕು. ಸಮೂಹಿಕ ವಿವಾಹಗಳಲ್ಲಿ ಕನಿಷ್ಠ 10 ಜೋಡಿಗಳು ಭಾಗವಹಿಸಿರಬೇಕು. ಈ ಸೌಲಭ್ಯ ಪಡೆಯುವ ವಧುವಿಗೆ ಕನಿಷ್ಠ 18 ವರ್ಷದಿಂದ ಗರಿಷ್ಠ 42 ವರ್ಷಗಳು, ವರನಿಗೆ ಕನಿಷ್ಠ 21 ವರ್ಷದಿಂದ ಗರಿಷ್ಠ 45 ವರ್ಷ ವಯಸ್ಸು ಆಗಿರಬೇಕು. ವಧು-ವರರ ವಾರ್ಷಿಕ ಆದಾಯವು ರೂ. 2.50 ಲಕ್ಷಗಳು ಮತ್ತು ಒಟ್ಟಾರೆ ರೂ. 5 ಲಕ್ಷಗಳನ್ನು ಮೀರಿರಬಾರದು. ಈ ಸೌಲಭ್ಯವು ಜೀವನದಲ್ಲಿ ಒಮ್ಮೆ ಮಾತ್ರ ಪಡೆಯಬಹುದಾಗಿದೆ. ವರನಿಗೆ ಈಗಾಗಲೇ ಜೀವಂತ ಪತ್ನಿಯಿದ್ದಲ್ಲಿ ಅಥವಾ ವಧುವಿಗೆ ಜೀವಂತ ಪತಿ ಇದ್ದಲ್ಲಿ ಈ ಯೋಜನೆಯು ಅನ್ವಯಿಸುವುದಿಲ್ಲ. ಒಂದು ಕುಟುಂಬದಲ್ಲಿ ಒಬ್ಬರಿಗೆ ಮಾತ್ರ ಈ ಯೋಜನೆಯ ಸೌಲಭ್ಯ ಲಭ್ಯ. ವಧು-ವರರು ಕನಿಷ್ಠ ಏಳು ದಿನ ಮುಂಚಿತವಾಗಿ ವಾಸ್ತವ್ಯವಿರುವ ಜಿಲ್ಲೆಯಲ್ಲಿಯೇ ಅರ್ಜಿ ಸಲ್ಲಿಸಬೇಕು. ಸಾಮೂಹಿಕ ವಿವಾಹ ಕಾರ್ಯಕ್ರಮದ ಫೋಟೊ ಹಾಗೂ ವಧು-ವರರ ಜಂಟಿ ಭಾವಚಿತ್ರಗಳನ್ನು (ಜಿ.ಪಿ.ಎಸ್ ಸ್ಥಿರ ಚಿತ್ರಗಳನ್ನು) ಸಲ್ಲಿಸುವುದು. ಅರ್ಹ ವಧು-ವರರಿಗೆ ಮಂಜೂರಾದ ಪ್ರೋತ್ಸಾಹಧನವನ್ನು ವಧು ಮತ್ತು ವರನ ಹೆಸರಿನಲ್ಲಿರುವ ಜಂಟಿ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುವುದು. ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರುಗಳಿಗೆ ಪ್ರೋತ್ಸಾಹ ಹಾಗೂ ವಿವಾಹದ ಖರ್ಚು-ವೆಚ್ಚಗಳಿಗಾಗಿ ಪ್ರತಿ ಜೋಡಿಗೆ 5 ಸಾವಿರ ರೂ.ಗಳನ್ನು ನೀಡಲಾಗುವುದು.

ಸಾಮೂಹಿಕ ವಿವಾಹಗಳನ್ನು ಏರ್ಪಡಿಸುವ ಆಯೋಜಕರು ಏಳು ದಿನ ಮುಂಚಿತವಾಗಿ ಕಾರ್ಯಕ್ರಮ ಆಯೋಜನೆ ಬಗ್ಗೆ ಅರ್ಜಿ ಸಲ್ಲಿಸುವುದು. ವಿವಾಹ ನಡೆದ ದಿನಾಂಕದಿಂದ 3 ದಿನದೊಳಗಾಗಿ ಅಗತ್ಯ ದಾಖಲೆಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಕಛೇರಿಗೆ ಸಲ್ಲಿಸುವುದು. ಪ್ರೋತ್ಸಾಹ ಧನ ಪಡೆಯಲು ಮದುವೆ ದಿನಾಂಕದಿಂದ 3 ತಿಂಗಳ ಒಳಗಾಗಿ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಕಛೇರಿಗೆ ನಿಗದಿತ ನಮೂನೆಯಲ್ಲಿ ಮದುವೆ ಪ್ರಮಾಣಪತ್ರ ಮತ್ತು ಅಗತ್ಯ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ-ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

> ಜಿಲ್ಲಾ ನೋಂದಣಿ/ವಕ್ಫ್ ಬೋರ್ಡ ಕಛೇರಿಗಳಲ್ಲಿ ಸಾಮೂಹಿಕ ವಿವಾಹಗಳ ಆಯೋಜಕರೆಂದು ನೋಂದಣಿಯಾಗಿರುವ ಖಾಸಗಿ ಟ್ರಸ್ಟ್‌ಗಳು, ದೇವಸ್ಥಾನದ ಟ್ರಸ್ಟ್‌ಗಳು, ಸಂಘಗಳು, ಸೊಸೈಟಿಗಳು, ವಕ್ಫ್ ಸಂಸ್ಥೆಗಳು ಮತ್ತು ಖಾಸಗಿ ವ್ಯಕ್ತಿಗಳು ನಡೆಸುವ ಸಾಮೂಹಿಕ ವಿವಾಹ ಕಾರ್ಯಕ್ರಮಗಳಲ್ಲಿ ವಿವಾಹವಾದಲ್ಲಿ ಮಾತ್ರ ಅರ್ಜಿ ಸಲ್ಲಿಸಲು ಅರ್ಹರಿರುತ್ತಾರೆ.

## ದೆಹಲಿಯಲ್ಲಿ ವಾಯು ಮಾಲಿನ್ಯ ತೀವ್ರ: ಇಂದಿನಿಂದ ಉದ್ಯೋಗಿಗಳಿಗೆ ವರ್ಕ್ ಫ್ರಂ ಹೋಂ!

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿಯಲ್ಲಿ ವಾಯು ಮಾಲಿನ್ಯ ಪ್ರಮಾಣ ಅತೀ ಗಂಭೀರ ಮಟ್ಟಕ್ಕೆ ತಲುಪಿರುವ ಹಿನ್ನೆಲೆಯಲ್ಲಿ, ಇಂದಿನಿಂದ ರಾಷ್ಟ್ರ ರಾಜಧಾನಿಯಲ್ಲಿ ಕಠಿಣ ನಿರ್ಬಂಧಗಳನ್ನು ಜಾರಿಗೆ ತರಲು ದೆಹಲಿ ಸರ್ಕಾರ ನಿರ್ಧರಿಸಿದೆ.

ಗುರುವಾರದಿಂದ ದೆಹಲಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಸಂಸ್ಥೆಗಳು ತಮ್ಮ ಸಿಬ್ಬಂದಿಗೆ ಕಡ್ಡಾಯವಾಗಿ ಮನೆಯಿಂದಲೇ ಕೆಲಸ ಮಾಡುವಂತೆ ಸೂಚಿಸಬೇಕು ಎಂದು ದೆಹಲಿ ಕಾರ್ಮಿಕ ಸಚಿವ ಕಪಿಲ್ ಮಿಶ್ರಾ ಆದೇಶಿಸಿದ್ದಾರೆ.

ವಾಯು ಗುಣಮಟ್ಟ ನಿರ್ವಹಣಾ ಆಯೋಗ ಮತ್ತು ಪರಿಸರ ಇಲಾಖೆ ನೀಡಿದ ನಿರ್ದೇಶನಗಳ ಅನುಸಾರ, ಗುರುವಾರದಿಂದ ಯಾವುದೇ ಸರ್ಕಾರಿ ಅಥವಾ ಖಾಸಗಿ ಕಚೇರಿಯಲ್ಲಿ ಶೇ.50ಕ್ಕಿಂತ ಹೆಚ್ಚು ಸಿಬ್ಬಂದಿ ಹಾಜರಾಗುವಂತಿಲ್ಲ.

## ಆರೋಗ್ಯದ ಕುರಿತು ಕಾಳಜಿಯಿರಲಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿವೃತ್ತ ಸೈನಿಕರ ಅಥವಾ ಪ್ಯಾರಾ ಮಿಲಿಟರಿ ನಿವೃತ್ತ ಯೋಧರ ಮನೆಗಳಲ್ಲಿ ಕಾರ್ಯಗಳು ನಡೆದರೆ ಅದರಲ್ಲಿ ನಾವೆಲ್ಲರೂ ಪಾಲ್ಗೊಳ್ಳೋಣ. ಅವರಿಗೆ ಬೆನ್ನೆಲುಬಾಗಿ ನಿಂತು ಅವರ ಕಾರ್ಯವನ್ನು ಸಾಂಗ ಮಾಡೋಣ. ಅಂದರೆ ನಮ್ಮಲ್ಲಿನ ಬಾಂಧವ್ಯ ವೃದ್ಧಿಸಲು ಸಾಧ್ಯ ಎಂದು ನರೇಗಲ್ಲ ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ ಹೇಳಿದರು.

ಪಟ್ಟಣದ ನಿವೃತ್ತ ಸೈನಿಕರ ಸಂಘದ ಕಚೇರಿಯಲ್ಲಿ ನಡೆದ ಮಾಸಿಕ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿವೃತ್ತ ಸೈನಿಕರು ತಮ್ಮ ಆರೋಗ್ಯದ ಬಗ್ಗೆಯೂ ವಿಶೇಷ ಕಾಳಜಿ ವಹಿಸಬೇಕು. ಹಾಗೆಯೇ ಕುಟುಂಬದವರ ಬಗ್ಗೆಯೂ ಕಾಳಜಿ ವಹಿಸಬೇಕು. ಏನಾದರೂ ತೊಂದರೆಯೆನಿಸಿದರೆ ತಕ್ಷಣ ವೈದ್ಯರ ಬಳಿ ಹೋಗಿ ಚಿಕಿತ್ಸೆ ಪಡೆದು ಬರಬೇಕೆಂದರು.

ನಮ್ಮ ಸಂಘದ ನೂತನ ಸದಸ್ಯರಾದ ಶರಣಪ್ಪ ನಾಶಿಪುಡಿಯವರು ಅಬ್ಬಿಗೇರಿ ರಸ್ತೆಯಲ್ಲಿ ಟೈಲ್ಸ್ ಮತ್ತಿತರ ವಸ್ತುಗಳ ಅಂಗಡಿಯನ್ನು ತೆರೆದಿದ್ದಾರೆ. ಅವಶ್ಯವಿದ್ದರೆ ಅವರ ಅಂಗಡಿಯಲ್ಲಿ ವಸ್ತುಗಳನ್ನು ಖರೀದಿಸುವ ಮೂಲಕ ಅವರಿಗೆ ಪ್ರೋತ್ಸಾಹ ನೀಡೋಣ ಎಂದು ತಿಳಿಸಿದರು.

ಸಭೆಯಲ್ಲಿ ನಿವೃತ್ತ ಸೈನಿಕರಾದ ಬಸವೇಶ್ವರ ಚಿಕ್ಕೊಪ್ಪದ, ಶಿವಪ್ಪ ಹಂಡಿ, ಸಂಗಪ್ಪ ಕುಷ್ಟಗಿ, ರಾಮಪ್ಪ ರೋಣದ, ಶಶಿಕಾಂತ ಕರಡಿ, ಗುರುಶಾಂತಗೌಡ ಮಲ್ಲನಗೌಡ್ರ, ಈಶ್ವರಚಂದ್ರ ಬಾಗಲಿ, ಆಂಜನೇಯ ಪೂಜಾರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಮಂದಾಲಪ್ಪ ಸಂಗನಾಳ, ದಾದಾಸಾಬ ನದಾಫ್, ಈರಪ್ಪ ದೊಡ್ಡಣ್ಣವರ, ಕುಮಾರಸ್ವಾಮಿ ಕೋರಧಾನ್ಯಮಠ, ಉಮೇಶ ಕರಮುಡಿ, ಪ್ರಭುದೇವ ಮುಕ್ಕನಗೌಡ್ರ, ಸಿದ್ದರಾಮಪ್ಪ ಕಟ್ಟಿಮನಿ, ಶರಣಪ್ಪ ನಾಶಿಪುಡಿ, ಬಸವರಾಜ ಯಕ್ಕುಂಡಿ, ಶಿವಪ್ಪ ಶಿವಾಪುರ, ರಾಮಪ್ಪ ರೋಣದ, ದಿನೇಶ ಕೋಗಿಲೆ, ಮಲ್ಲಮ್ಮ ಭೈರಗೊಂಡ, ದಾವಲಸಾಬ ಕಿಲ್ಲೇದಾರ, ಮಲ್ಲಿಕಾರ್ಜುನ ಮಲ್ಲನಗೌಡ್ರ, ಶಿವಾನಂದ ಬಂಡಿಹಾಳ, ಸುಮಿತ್ರಾಬಾಯಿ ದಳವಾಯಿ ಇನ್ನಿತರರು ಪಾಲ್ಗೊಂಡಿದ್ದರು.

### ವಾರ್ತಾ ಇಲಾಖೆಯಿಂದ ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

## ಸ್ಟೈಫಂಡ್‌ನೊಂದಿಗೆ ಉತ್ತಮ ಪತ್ರಕರ್ತರಾಗಲು ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಗದಗ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಕಚೇರಿಯಲ್ಲಿ ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ತರಬೇತಿಗಾಗಿ ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾಷೆ ಬಳಸಲು ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಸಲು ನಿಗದಿ ಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ನಿಗದಿತ ದಿನಾಂಕದ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು.

ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಗದಗ ಜಿಲ್ಲೆಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಸ್ನಾತಕೋತ್ತರ ಅಂತಿಮ ವರ್ಷದ ಪದವಿಯ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ತರಬೇತಿಯ ಅವಧಿ ವೇಳೆ ಮಾಹೆಯಾನ 15 ಸಾವಿರ ರೂ.ಗಳ ಸ್ಟೈಫಂಡ್ ನೀಡಲಾಗುವುದು ಹಾಗೂ ತರಬೇತಿಯ ಅವಧಿ ಬೆಳ್ಳಿಗೆ 10ರಿಂದ ಸಂಜೆ 5.30ರವರೆಗೆ ಇರುತ್ತದೆ.

ಈ ತರಬೇತಿಯು ಜನವರಿ-2026ರ ಮಾಹೆಯಿಂದ ಪ್ರಾರಂಭಗೊಂಡು ಡಿಸೆಂಬರ್-2026ಕ್ಕೆ ಕೊನೆಗೊಳ್ಳಲಿದೆ. ಈ ತರಬೇತಿಯು 12 ತಿಂಗಳ ಅಪ್ರೆಂಟಿಸ್ ತರಬೇತಿಯಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸುವಂತೆ ಒತ್ತಡ ತರುವಂತಿಲ್ಲ ಹಾಗೂ ತರಬೇತಿಯ ಅವಧಿಯಲ್ಲಿ ಬೇರೆ ಉದ್ಯೋಗ ಮಾಡಬಾರದು.

ಆಸಕ್ತರು ಅರ್ಜಿಯನ್ನು 2025ರ ಡಿಸೆಂಬರ್ 26ರೊಳಗಾಗಿ ನಂ.29, ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಡಳಿತ ಭವನ ಗದಗ ಇಲ್ಲಿಗೆ ಸಲ್ಲಿಸಬಹುದಾಗಿದೆ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಗದಗ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ತರಬೇತಿ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದಿರುಗಿಸುವುದಿಲ್ಲ. ಸರ್ಕಾರಿ ಅಥವಾ ಖಾಸಗಿ ಸಂಸ್ಥೆಯಲ್ಲಿ ಖಾಯಂ ಉದ್ಯೋಗ ಸಿಕ್ಕಿದಲ್ಲಿ ಷರತ್ತಿಗೊಳಪಟ್ಟು ಮೂಲ ದಾಖಲಾತಿಗಳನ್ನು ಹಿಂದಿರುಗಿಸಲಾಗುವುದು. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು. ಈ ಎಲ್ಲಾ ಷರತ್ತುಗಳನ್ನು ಪಾಲಿಸುವುದಾಗಿ ಆಯ್ಕೆಯಾದ ಅಭ್ಯರ್ಥಿಗಳಿಂದ 20 ರೂ.ಗಳ ಛಾಪ ಕಾಗದದಲ್ಲಿ ಲಿಖಿತ ಹೇಳಿಕೆ ಪಡೆಯಲಾಗುವುದು.

## ಕರಾವಳಿ ಪ್ರದೇಶದಲ್ಲಿನ ದ್ವೀಪಗಳ ಅಭಿವೃದ್ಧಿ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ

ರಾಜ್ಯದ ಕರಾವಳಿ ಪ್ರದೇಶದಲ್ಲಿನ 106 ದ್ವೀಪಗಳನ್ನು ಪರಿಸರ ಹಾಗೂ ಪ್ರವಾಸೋದ್ಯಮ ಚಟುವಟಿಕೆಗಳ ಕೇಂದ್ರಗಳಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ ಎಂದು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವ ಮಂಕಾಳ ಎಸ್.ವೈದ್ಯ ತಿಳಿಸಿದ್ದಾರೆ.

ಅವರು ವಿಧಾನ ಪರಿಷತ್‌ನಲ್ಲಿ ಸದಸ್ಯ ರಮೇಶ್ ಬಾಬು ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ಉತ್ತರ ಕನ್ನಡ ಜಿಲ್ಲೆಯಲ್ಲಿನ 7 ದ್ವೀಪಗಳನ್ನು ಪರಿಸರ ಪ್ರವಾಸೋದ್ಯಮವಾಗಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸಲು ವ್ಯವಹರಣಾ ಸಲಹೆಗಾರರನ್ನು ಆಯ್ಕೆ ಮಾಡಲಾಗಿದ್ದು, ಕಾರ್ಯ ಸಾಧ್ಯತಾ ವರದಿ ತಯಾರಿಸಲಾಗುತ್ತಿದೆ.

ಉಡುಪಿ ಜಿಲ್ಲೆಯ 7 ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ 1 ದ್ವೀಪಗಳಿಗೆ Feasibility Report ತಯಾರಿಸಲಾಗಿದೆ. ಈ ಪೈಕಿ 3 ದ್ವೀಪಗಳಾದ ದ-ರಿಯಾ ಬಹದ್ದೂರ್‌ಘಡ, ಮಲ್ಪೆ ಮತ್ತು ಅಯಾಬಾ ದ್ವೀಪಗಳನ್ನು ಅಭಿವೃದ್ಧಿಪಡಿಸಲು ಉಖಖ (Master Plan) ಸಿದ್ಧಪಡಿಸಲಾಗಿದೆ.

ರಾಜ್ಯವು ಸುಮಾರು 185.21 ನಾಟಿಕಲ್ ಮೈಲಿ (ಸುಮಾರು 343 ಕಿ.ಮೀ) ಕಡಲ ತೀರವನ್ನು ಹೊಂದಿದ್ದು, ರಾಜ್ಯದಲ್ಲಿ ಒಟ್ಟು 13 ಸಣ್ಣ ಬಂದರುಗಳು ಹಾಗೂ ಒಂದು ಬೃಹತ್ ಬಂದರು (ನವ ಮಂಗಳೂರು ಬಂದರು) ಇರುತ್ತದೆ. ರಾಜ್ಯದಲ್ಲಿ ಮೀನುಗಾರರಿಗೆ ತೊಂದರೆಯಾಗದಂತೆ ಬಂದರುಗಳನ್ನು ಮತ್ತು ಕರಾವಳಿ ಪ್ರವಾಸೋದ್ಯಮವನ್ನು ಅಭಿವೃದ್ಧಿ ಮಾಡಲಾಗುವುದು ಎಂದರು.

**ಸಮಸ್ಯೆ ಇದ್ದರೂ ಕಣ್ಮುಚ್ಚಿ ಕುಳಿತ ಶಿಕ್ಷಣ ಇಲಾಖೆ | ಸಿ.ಸಿ.ಎನ್. ಸರಕಾರಿ ಪ್ರೌಢಶಾಲೆಯಲ್ಲಿ ಮೂಲಭೂತ ಸೌಕರ್ಯಗಳೇ ಮರೀಚಿಕೆ**

# ಮೂತ್ರಾಲಯವಿಲ್ಲ, ಪ್ರಕೃತಿಯ ಕರೆಗೆ ವಿಶಾಲ ಬಯಲೇ ಆಸರೆ!



ಈ ಕುರಿತು ಪ್ರತಿಕ್ರಿಯಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಣಕೀನಾಯ್ಕ, ಪಿಂಕ್ ಶೌಚಾಲಯ ಸ್ಲ್ಯಾಬ್ ಹಂತದಲ್ಲಿದೆ, ಕುಡಿಯುವ ನೀರಿನ ಟ್ಯಾಪ್ ಸಂಪರ್ಕಕ್ಕಾಗಿ ಪಟ್ಟಣ ಪಂಚಾಯಿತಿಗೆ ಮುಖ್ಯೋಪಾಧ್ಯಾಯರು ಹಲವು ಬಾರಿ ಪತ್ರ ಬರೆದರೂ ಸ್ಪಂದಿಸಿಲ್ಲ ಎಂದರು.

ಎಸ್‌ಡಿಎಂಸಿ ಅಧ್ಯಕ್ಷ ರಾಮಣ್ಣ ಕಂಬಳಿ ಈ ಕುರಿತು ಪ್ರತಿಕ್ರಿಯಿಸಿ, ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ಲಭಿಸುತ್ತಿರುವದರಿಂದ ಹೆಚ್ಚಿನ ವಿದ್ಯಾರ್ಥಿಗಳು ದಾಖಲಾಗುತ್ತಿದ್ದಾರೆ. ಶಿಕ್ಷಣ ಇಲಾಖೆಯ ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಸಮರ್ಪಕ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ಗೇಟ್ ಮತ್ತು ಕಂಪೌಂಡ್ ವ್ಯವಸ್ಥೆಯನ್ನು ಕಲ್ಪಿಸಬೇಕೆಂದು ಹೇಳಿದರು.



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ತಾಲೂಕಿನ ಮೇಗೇರಿ ಓಣಿಯಲ್ಲಿರುವ ಸಿ.ಸಿ.ಎನ್. ಸರಕಾರಿ ಪ್ರೌಢಶಾಲೆ ಇತ್ತೀಚಿನ ವರ್ಷಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಸರು ಪಡೆಯುತ್ತಿದೆ. ಆದರೆ, ಶಾಲೆಯಲ್ಲಿ ವಿದ್ಯಾರ್ಥಿ/ನಿಯರಿಗೆ ಮೂಲಭೂತ ಅಗತ್ಯತೆಗಳಲ್ಲೊಂದಾದ ಸಮರ್ಪಕ ಶೌಚಾಲಯ ವ್ಯವಸ್ಥೆ ಇಲ್ಲದೇ ಇರುವುದರಿಂದ ವಿಶಾಲವಾದ ಬಯಲೇ ವಿದ್ಯಾರ್ಥಿಗಳ ಮೂತ್ರವಿಸರ್ಜನೆಯ ಸ್ಥಳವಾಗಿದೆ.

ಸದ್ಯ ಪ್ರೌಢಶಾಲೆಯಲ್ಲಿ 8, 9 ಮತ್ತು 10ನೇ ತರಗತಿಯಲ್ಲಿ 469 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದಾರೆ. ವರ್ಷದಿಂದ ವರ್ಷಕ್ಕೆ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಅತ್ಯುತ್ತಮ ಸಾಧನೆಯನ್ನೂ ದಾಖಲಿಸುತ್ತಿದೆ. ಇಲ್ಲಿಗೆ ಪೋಷಕರು ತಮ್ಮ ಮಕ್ಕಳನ್ನು ಸೇರಿಸಲು ದುಂಬಾಲು ಬೀಳುತ್ತಾರೆ. ಇಂತಹ ಶಾಲೆಗೆ ಅಗತ್ಯವಿರುವ ಮೂಲಭೂತ ಸೌಲಭ್ಯವನ್ನು ಕಲ್ಪಿಸಲು ಇಲಾಖೆ ಮರೆತಂತೆ ಕಾಣುತ್ತಿದೆ.

ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಇದ್ದು, ಅದು ಕೇವಲ ಬೆರಳೆಣಿಕೆಯಷ್ಟು ಮಾತ್ರ. ಇತ್ತೀಚೆಗೆ ಪಿಂಕ್ ಶೌಚಾಲಯ ಕೆಲಸ ಪ್ರಗತಿಯಲ್ಲಿದೆ. ಆದರೆ ವಿದ್ಯಾರ್ಥಿಗಳಿಗೆ ಇದರ ಭಾಗ್ಯ ಇಲ್ಲದೇ ಇರುವುದರಿಂದ ಶಾಲೆಯ ಎದುರುಗಡೆ ಇರುವ ವಿಶಾಲವಾದ ಬಯಲಿನ ಗಿಡಗಂಟಿಗಳ ಅಂಚಿನ ಬಳಿ ತೆರಳಿ ಮೂತ್ರ ವಿಸರ್ಜನೆ ಪೂರೈಸಬೇಕಾಗಿದೆ. ಈ ಅವ್ಯವಸ್ಥೆಯನ್ನು ಸರಿಪಡಿಸುವ ಗೋಜಿಗೆ ಶಿಕ್ಷಣ ಇಲಾಖೆಯ ಅಧಿಕಾರಿಗಳು ಮುಂದಾಗದೇ ಇರುವುದರಿಂದ ವಿದ್ಯಾರ್ಥಿಗಳಿಗೆ ಬಯಲು ಪ್ರದೇಶವೇ ಗತಿ ಎಂಬಂತಾಗಿದೆ.

ಶಾಲೆಯ ವಿದ್ಯಾರ್ಥಿಗಳಿಗೆ ಸಮರ್ಪಕ ಕುಡಿಯುವ ನೀರಿನ ವ್ಯವಸ್ಥೆ ಇಲ್ಲ. ಹೊರಗಡೆಯಿಂದ ಕ್ಯಾನ್‌ಗಳ ಮೂಲಕ ಶುದ್ಧ ನೀರನ್ನು ತಂದು ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ. 469 ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿರುವ ಸರಕಾರಿ ಶಾಲೆಗೆ ಅವಶ್ಯಕವಿರುವ ಶುದ್ಧ ನೀರಿನ ಘಟಕ ಇಲ್ಲಿಯವರೆಗೂ ಇಲ್ಲದೇ ಇರುವುದರಿಂದ ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ಶಿಕ್ಷಕರು/ದಾನಿಗಳು ಶುದ್ಧ ಕುಡಿಯುವ ನೀರನ್ನು ತಂದು ಪೂರೈಸುತ್ತಿದ್ದಾರೆ. ಇತ್ತೀಚೆಗೆ ಬೋರ್‌ವೆಲ್ ರಿಪೇರಿಯಾಗಿದೆ ಎಂದು ಹೇಳುತ್ತಿದ್ದರೂ, ಬೋರ್‌ವೆಲ್ ನೀರು ವಿದ್ಯಾರ್ಥಿಗಳಿಗೆ ಕುಡಿಯಲು ಯೋಗ್ಯವೇ ಎಂದು ಸಂಬಂಧಿಸಿದ ಅಧಿಕಾರಿಗಳೇ ಉತ್ತರಿಸಬೇಕಿದೆ.

ವಿಶಾಲವಾದ ಸ್ಥಳವನ್ನು ಹೊಂದಿರುವ ಈ ಶಾಲೆಗೆ ಸಮರ್ಪಕ ಆಟದ ಮೈದಾನವಿಲ್ಲ, ವಿದ್ಯಾರ್ಥಿನಿಯರು ಶೌಚಾಲಯಕ್ಕೆ ತೆರಳಲು ಸಮರ್ಪಕ ರಸ್ತೆ ಇಲ್ಲ, ಎಲ್ಲೆಂದರಲ್ಲಿ ಗಿಡ-ಗಂಟಿಗಳು ಬೆಳೆದಿದ್ದು, ಶಾಲೆಗೆ ಅವಶ್ಯಕವಿರುವ ಗೇಟ್ ವ್ಯವಸ್ಥೆ ಹಾಗೂ ಕಂಪೌಂಡ್ ವ್ಯವಸ್ಥೆ ಇಲ್ಲದೇ ಅವ್ಯವಸ್ಥೆಗಳ ಯಾದಿಯೇ ದೊಡ್ಡದಾಗುತ್ತಿದೆ.

ಇತ್ತೀಚಿನ ವರ್ಷಗಳಲ್ಲಿ ಖಾಸಗಿ ಶಾಲೆಗಳ ಭರಾಟೆಯಲ್ಲಿ ಸರಕಾರಿ ಶಾಲೆಗಳು ತಮ್ಮ ಅಸ್ತಿತ್ವವನ್ನೇ ಕಳೆದುಕೊಳ್ಳುತ್ತಿವೆ. ಇಂತಹ ಸಂದರ್ಭದಲ್ಲಿ ಇಂತಹ ಸರಕಾರಿ ಶಾಲೆಗಳನ್ನು ಉಳಿಸಿ ಮುನ್ನಡೆಸುವವುದು ಶಿಕ್ಷಣ ಇಲಾಖೆಯ ಅಧಿಕಾರಿಗಳ ಜವಾಬ್ದಾರಿ. ಈ ಶಾಲೆಯ ವಿದ್ಯಾರ್ಥಿಗಳು ಬಯಲು ಮೂತ್ರವಿಸರ್ಜನೆ ಮಾಡುತ್ತಿರುವುದು ಶಿಕ್ಷಣ ಇಲಾಖೆಯ ಅಧಿಕಾರಿಗಳ ಗಮನಕ್ಕಿಲ್ಲವೇ, ಸಮರ್ಪಕ ನೀರು ಪೂರೈಕೆಗೆ ಯಾಕೆ ಕ್ರಮ ವಹಿಸಿಲ್ಲ ಎಂಬುದಕ್ಕೆ ಸಂಬಂಧಿಸಿದ ಅಧಿಕಾರಿಗಳೇ ಉತ್ತರಿಸಬೇಕಿದೆ.

# ನಿಯಮಾವಳಿ ರೂಪಿಸಲು ಕಾಲಾವಕಾಶ ಬೇಕು

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಗ್ರಾಮೀಣ ಪ್ರದೇಶಗಳಲ್ಲಿನ ಕಂದಾಯ ಜಮೀನಿನಲ್ಲಿ ನಿವೇಶನವನ್ನು ಕೇವಲ ಕರಾರು ಒಪ್ಪಂದ ಪತ್ರದಲ್ಲಿ ಖರೀದಿಸಿ, ಮನೆ ನಿರ್ಮಿಸಿಕೊಂಡವರಿಗೆ ಹಕ್ಕುಪತ್ರ ನೀಡಿ, ಖಾತಾ ಒದಗಿಸುವುದಕ್ಕೆ ನಿಯಮಗಳನ್ನು ರೂಪಿಸಲು ಕಾಲಾವಕಾಶ ಬೇಕಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು.



ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಜೆ.ಎನ್. ಗಣೇಶ್ ಅವರ ಪ್ರಶ್ನೆಗೆ ಉತ್ತರಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಬಡ ಕುಟುಂಬಗಳು ಕಂಪ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆ ಬೆಲೆಗೆ ನಿವೇಶನಗಳು ದೊರಕುತ್ತದೆ ಎಂದು ಈ ಹಿಂದೆ ಕಂದಾಯ ಜಮೀನಿನ ನಿವೇಶನಗಳಲ್ಲಿ ಜಮೀನಿನ ಮಾಲೀಕರೊಂದಿಗೆ ಅಗ್ರೀಮೆಂಟ್ ಪತ್ರ ಮಾಡಿಕೊಂಡು ಖರೀದಿಸಿ, ಈಗಾಗಲೇ ವಸತಿ ಮನೆಗಳನ್ನು ನಿರ್ಮಿಸಿಕೊಂಡು ವಾಸವಿದ್ದಾರೆ. ಇಂತಹ ಪ್ರಕರಣಗಳು ರಾಜ್ಯಾದ್ಯಂತ ಇವೆ. ಹೀಗಾಗಿ ಇಂತಹವರಿಗೆ ದಾಖಲೆಗಳನ್ನು ಪರಿಶೀಲಿಸಿ, ಹಕ್ಕುಪತ್ರ ಕೊಡಿಸಿ, ಇವರಿಗೆ ನ್ಯಾಯ ಒದಗಿಸಿಕೊಡಬೇಕಿದೆ ಎಂದು ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಮನವಿ ಮಾಡಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಖಾಸಗಿ ಜಮೀನುಗಳಲ್ಲಿ ನೆಲೆಸಿರುವ ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮ ಅಥವಾ ಗ್ರಾಮದ ಭಾಗವಾಗಿ ಪರಿವರ್ತಿಸಿ, ಅಲ್ಲಿನ ನಿವಾಸಿಗಳಿಗೆ ಭೂಸುಧಾರಣಾ ಕಾಯ್ದೆ ಅನ್ವಯ ಹಕ್ಕುಪತ್ರಗಳನ್ನು ಕಂದಾಯ ಇಲಾಖೆಯಿಂದ ವಿತರಿಸಲು ಅವಕಾಶ ಕಲ್ಪಿಸಲಾಗಿದ್ದು, ಕಂದಾಯ ಇಲಾಖೆಯಿಂದ ಹಕ್ಕುಪತ್ರ ಒದಗಿಸಿದಲ್ಲಿ, ಗ್ರಾಮ ಪಂಚಾಯತಿಗಳಿಗೆ ಖಾತೆ ವಿತರಣೆ ಮಾಡಲು ಅವಕಾಶವಿರುತ್ತದೆ. ಆದರೆ ಕೇವಲ ಅಗ್ರೀಮೆಂಟ್ ಪತ್ರದ ಆಧಾರದಲ್ಲಿ ನಿವೇಶನ ಖರೀದಿಸಿ, ವಸತಿ ನಿರ್ಮಿಸಿದವರಿಗೆ, ಒಂದು ಬಾರಿಯ ಪರಿಹಾರವಾಗಿ ಖಾತಾ ಮಾಡಿಕೊಡಲು ನಿಯಮಗಳನ್ನು ರೂಪಿಸಬೇಕಾಗುತ್ತದೆ. ಇದಕ್ಕೆ ಸಾಕಷ್ಟು ಕಾಲಾವಕಾಶ ಬೇಕಾಗುತ್ತದೆ ಎಂದರು.

# ಬೆಳೆ ಸಮೀಕ್ಷೆ ವ್ಯತ್ಯಾಸವಿದ್ದಲ್ಲಿ ಆಕ್ಷೇಪ ಸಲ್ಲಿಸಿ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಕೃಷಿ ಜಮೀನುಗಳಲ್ಲಿ ಬೆಳೆ ಸಮೀಕ್ಷೆಯನ್ನು ಸ್ವತಃ ರೈತರೇ ಬೆಳೆ ಸಮೀಕ್ಷೆ ರೈತರ ಆ್ಯಪ್‌ನಲ್ಲಿ ಬೆಳೆ ಮಾಹಿತಿ ನಮೂದಿಸಲು ಅವಕಾಶ ಕಲ್ಪಿಸಲಾಗಿದ್ದು, ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ರೈತರು ನಿಗದಿತ ಸಮಯದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಕೃಷಿ ಸಚಿವ ಚಲುವರಾಯ ಸ್ವಾಮಿ ಹೇಳಿದರು.



ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ತರೀಕೆರೆ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಹೆಚ್. ಶ್ರೀನಿವಾಸ್ ಅವರ ಪ್ರಶ್ನೆಗೆ ಉತ್ತರಿಸಿದರು.

ಸಕಾಲದಲ್ಲಿ ರೈತರು ಬೆಳೆ ಸಮೀಕ್ಷೆ ಮಾಡದೇ ಇದ್ದಲ್ಲಿ ಖಾಸಗಿ ನಿವಾಸಿಗಳ ಮೂಲಕ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ. ಖಾಸಗಿ ನಿವಾಸಿಗಳ ಬದಲಿಗೆ ಸಂಘ-ಸಂಸ್ಥೆಗಳ ಮೂಲಕ ಬೆಳೆ ಸಮೀಕ್ಷೆ ಮಾಡಿಸಲು ಅವಕಾಶ ಕಲ್ಪಿಸಿಲ್ಲ. ಬೆಳೆ ಮಾಹಿತಿ ಕುರಿತಂತೆ ಯಾವುದೇ ವ್ಯತ್ಯಾಸಗಳು ಕಂಡುಬಂದಲ್ಲಿ ರೈತರು ನಿಗದಿತ ಸಮಯದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು.

ರಾಜ್ಯದಲ್ಲಿ ಪ್ರತಿ ವರ್ಷ ಸುಮಾರು 4.40 ಕೋಟಿ ತಾಕುಗಳ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದ್ದು, ಸುಮಾರು 2 ಲಕ್ಷ ಆಕ್ಷೇಪಣೆಗಳೂ ಕೂಡ ಸಲ್ಲಿಕೆಯಾಗುತ್ತಿದೆ. ಇಂತಹ ಪ್ರಕರಣಗಳಲ್ಲಿ ಮರು ಸಮೀಕ್ಷೆ ಮಾಡಿಸಿದ್ದೇವೆ. ಅಧಿಕಾರಿ, ಸಿಬ್ಬಂದಿಗಳು ಎಲ್ಲಿಯೋ ಕುಳಿತು ಬೆಳೆ ಸಮೀಕ್ಷೆ ಮಾಡಲು ಅವಕಾಶ ಇರುವುದಿಲ್ಲ ಎಂದರು.

ದಟ್ಟ ಅರಣ್ಯ ಹಾಗೂ ಅಭಯಾರಣ್ಯ ಪ್ರದೇಶಗಳಲ್ಲಿ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿಲ್ಲ. ಅಭಯಾರಣ್ಯ ಪ್ರದೇಶಗಳ ಅಂಚಿನ ಗ್ರಾಮಗಳಲ್ಲಿ ಬೆಳೆ ಸಮೀಕ್ಷೆ ಕಾರ್ಯ ಕೈಗೊಳ್ಳಲು ತೊಂದರೆಯಾಗುತ್ತಿರುವ ಕುರಿತಂತೆ ಯಾವುದೇ ದೂರು ಸಲ್ಲಿಕೆಯಾಗಿಲ್ಲ. ರೈತರೇ ಸ್ವತಃ ಬೆಳೆ ಸಮೀಕ್ಷೆಗೆ ಅವಕಾಶ ಕಲ್ಪಿಸಿರುವುದರಿಂದ ಈ ಸಮಸ್ಯೆ ಉದ್ಭವಿಸಿಲ್ಲ ಎಂದು ಸಚಿವರು ಹೇಳಿದರು.

ಮಲೆನಾಡು ಪ್ರದೇಶದ ಕೆಲವೆಡೆ ನೆಟ್‌ವರ್ಕ್ ಸಮಸ್ಯೆಯಿಂದಾಗಿ ಮೊಬೈಲ್ ಆ್ಯಪ್ ಮೂಲಕ ಬೆಳೆ ಸಮೀಕ್ಷೆ ಕಷ್ಟಕರವಾಗಿದೆ. ಹೀಗಾಗಿ ಮ್ಯಾನುವಲ್ ಮೂಲಕವೂ ಸಮೀಕ್ಷೆಗೆ ಅವಕಾಶ ಮಾಡಿಕೊಡಿ ಎಂದು ತೀರ್ಥಹಳ್ಳಿ ಶಾಸಕ ಆರಗ ಜ್ಞಾನೇಂದ್ರ ಸಲಹೆ ನೀಡಿದರು. ಇದೀಗ ಮಲೆನಾಡಿನ ಗ್ರಾಮೀಣ ಪ್ರದೇಶಗಳಲ್ಲಿಯೂ ನೆಟ್‌ವರ್ಕ್ ಸುಧಾರಣೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಸಚಿವ ಚಲುವರಾಯಸ್ವಾಮಿ ಉತ್ತರಿಸಿದರು.

**ಜ.14ರಂದು ಹರಜಾತ್ರೆ | ವಚನಾನಂದ ಶ್ರೀಗಳಿಂದ ಆಹ್ವಾನ**

# ಸಮಾಜ ಸಂಘಟನೆ ಅತ್ಯವಶ್ಯಕ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮಾಜದ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಸಮಾಜ ಸಂಘಟನೆ ಅತ್ಯವಶ್ಯಕವಾಗಿದ್ದು, ಮಕ್ಕಳನ್ನು ಶೈಕ್ಷಣಿಕವಾಗಿ, ಧಾರ್ಮಿಕವಾಗಿ ಸದೃಢರನ್ನಾಗಿಸುವುದು ಬಹು ಮುಖ್ಯವಾಗಿದೆ ಎಂದು ಹರಿಹರದ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ ಹೇಳಿದರು.

ಪಟ್ಟಣದಲ್ಲಿ ಬುಧವಾರ ಜ. 14ರಂದು ಹರಿಹರ ಪೀಠದಲ್ಲಿ ಜರುಗಲಿರುವ ಹರಜಾತ್ರೆಗೆ ಸಮಾಜ ಬಾಂಧವರಿಗೆ ಆಹ್ವಾನ ನೀಡಿ ಅವರು ಆಶೀರ್ವಚನ ನೀಡಿದರು.

ಇಂದಿನ ಯುವ ಪೀಳಿಗೆ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಿದರೂ ನೈತಿಕವಾಗಿ ಹಾಗೂ ಸಂಸ್ಕಾರದ ದೃಷ್ಟಿಯಿಂದ ಹಿಂದೆ ಬಿದ್ದಿದ್ದಾರೆ. ಅವರನ್ನು ಸಂಸ್ಕಾರಯುತವಾಗಿಸಿ ಸಮಾಜದ ಶಕ್ತಿಯನ್ನಾಗಿಸುವ ನಿಟ್ಟಿನಲ್ಲಿ ಪಂಚಮಸಾಲಿ ಪೀಠದಲ್ಲಿ ಪಂಚ ದಾಸೋಹವನ್ನು ಹಮ್ಮಿಕೊಂಡಿದ್ದೇವೆ. ಪಂಚದಾಸೋಹದ ಮೂಲಕ ಮುಂದಿನ ಯುವ ಜನಾಂಗವನ್ನು ಸದೃಢವಾಗಿಸುವ ಕಾರ್ಯವಾಗುತ್ತಿದೆ. ಜ. 14ರಂದು ಹರಿಹರ ಪೀಠದಲ್ಲಿ ಜರುಗುವ ಹರಜಾತ್ರೆಗೆ ಸಮಾಜದ ಎಲ್ಲ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಜಾತ್ರೆಯ ಯಶಸ್ವಿಗೆ ಕಾರಣರಾಗಬೇಕು ಎಂದರು.

ಸಮಾಜದ ರಾಜ್ಯಾಧ್ಯಕ್ಷ ಸೋಮನಗೌಡ್ರ ಪಾಟೀಲ ಮಾತನಾಡಿ, 84 ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಪಂಚಮಸಾಲಿ ಸಮಾಜವು ಕೃಷಿ ಆಧಾರಿತ ಸಮಾಜವಾಗಿದೆ. ಸಮಾಜಕ್ಕೆ ಅದರದೇ ಆದ ಇತಿಹಾಸ ಇದ್ದು, ಅದನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯವಾಗಬೇಕು. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸಮಾನ ಸ್ಥಾನ ಲಭಿಸುವಂತಾಗಬೇಕು. ಮಕ್ಕಳನ್ನು ವಿದ್ಯಾವಂತರನ್ನಾಗಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಕಾರಣರಾಗಬೇಕು. ಸಮಾಜದ ಸಂಘಟನೆಗಾಗಿ ಹಗಲಿರುಳು ಶ್ರಮಿಸುತ್ತಿರುವ ಶ್ರೀಗಳಿಗೆ ನಮ್ಮ ಬೆಂಬಲ ಸದಾಕಾಲ ಇರಬೇಕು. ಅಂದಾಗ ಮಾತ್ರ ಸಮಾಜದ ಅಭಿವೃದ್ಧಿ ಸಾಧ್ಯ ಎಂದರು.

ವೀರಣ್ಣ ಕರಿಭೀಷ್ಟ, ಎಸ್.ವಿ. ಪಲ್ಲೇದ, ಎಫ್.ವಿ. ಪಾಟೀಲ, ಎಫ್.ಪಿ. ಮರಿಗೌಡ್ರ, ಡಾ. ಕೆ.ಬಿ. ಧನ್ನೂರ, ಬಸನಗೌಡ ಪೊಲೀಸ್‌ಪಾಟೀಲ, ಗಂಗಾಧರ ಕೋಟಗಿ, ಶಶಿಧರ ಸಂಕನಗೌಡ್ರ, ಸಿದ್ದಪ್ಪ ರಾಗಿ, ನಿಂಗಪ್ಪ ಕಣವಿ, ಕಲ್ಮೇಶ ತೊಂಡಿಹಾಳ, ಸಿದ್ದಲಿಂಗಪ್ಪ ಚಿಕ್ಕೊಪ್ಪದ, ವೀರಣ್ಣ ಅಣ್ಣಿಗೇರಿ, ವೀರಣ್ಣ ಗುಜಮಾಗಡಿ, ಉಮೇಶ ಪಾಟೀಲ, ಶರಣು ದಡ್ಡೂರ, ಮಂಜು ಕಮಲಾಪೂರ, ರುದ್ರೇಶ ಕೋಟಗಿ, ಆನಂದ ಕೋಟಗಿ ಮುಂತಾದವರಿದ್ದರು. ಮುತ್ತಣ್ಣ ಪಲ್ಲೇದ ನಿರ್ವಹಿಸಿದರು.

**ಇಂಧನ ಖರೀದಿಗೆ 'ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ' ಕಡ್ಡಾಯಗೊಳಿಸಿದ ದೆಹಲಿ ಸರ್ಕಾರ**

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ರಾಷ್ಟ್ರ ರಾಜಧಾನಿ ದೆಹಲಿಯ ವಾಹನ ಮಾಲೀಕರು ಕಟ್ಟುನಿಟ್ಟಾದ ಆದೇಶ ಎದುರಿಸುತ್ತಾರೆ. ಡಿಸೆಂಬರ್ 18 ರಿಂದ ನಗರದಾದ್ಯಂತದ ಪೆಟ್ರೋಲ್ ಬಂಕ್‌ಗಳಲ್ಲಿ ಇಂಧನ ಖರೀದಿಗೆ ಮಾಲಿನ್ಯ ನಿಯಂತ್ರಣ ಪ್ರಮಾಣಪತ್ರ (ಪಿಯುಸಿ) ಕಡ್ಡಾಯಗೊಳಿಸಲಾಗಿದೆ.

**8ನೇ ಕ್ಲಸ್ಟರ್ ವಿಭಾಗದ ಉರ್ದು ಪ್ರಾಥಮಿಕ, ಪೌಢಶಾಲಾ ಮಕ್ಕಳ ಪ್ರತಿಭಾಕಾರಂಜಿ, ಕಲೋತ್ಸವದ ಸಮಾರೋಪ**

# ಪ್ರಯತ್ನವೇ ನಿಮ್ಮ ನಿಜವಾದ ಜಯ

**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರತಿಭಾಕಾರಂಜಿ ಕಾರ್ಯಕ್ರಮ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಿಸುವುದರ ಜೊತೆಗೆ ನಾಯಕತ್ವ ಗುಣ, ಅಭಿವ್ಯಕ್ತಿ ಸಾಮರ್ಥ್ಯ ಮತ್ತು ಸೃಜನಶೀಲತೆಯನ್ನು ಬೆಳೆಸುತ್ತವೆ ಎಂದು ಆ್ಯಂಗ್ಲೋ ಉರ್ದು ಸ್ಕೂಲ್ ಕಮಿಟಿ ಅಧ್ಯಕ್ಷ ಸರ್ಫರಾಜಅಹ್ಮದ ಎಸ್.ಉಮಚಗಿ ಹೇಳಿದರು.



ಶಹರದ ಅಂಜುಮನ್ ಉರ್ದು ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಜಿ.ಪಂ, ಸಮಗ್ರ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖೆ ಗದಗ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಾರ್ಯಾಲಯದ ಸಂಯೋಗದಲ್ಲಿ ನಡೆದ 8ನೇ ಕ್ಲಸ್ಟರ್ ವಿಭಾಗದ ಉರ್ದು ಪ್ರಾಥಮಿಕ, ಪ್ರೌಢಶಾಲಾ ಮಕ್ಕಳ ಪ್ರತಿಭಾಕಾರಂಜಿ, ಕಲೋತ್ಸವದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಉರ್ದು ಕೇವಲ ಒಂದು ಭಾಷೆಯಲ್ಲ, ಅದು ಸಹಬಾಳ್ವೆ, ಸಹಿಷ್ಣುತೆ ಹಾಗೂ ಸಂಸ್ಕೃತಿಯ ಸಂಕೇತವಾಗಿದೆ. ಗೆಲುವು-ಸೋಲು ಜೀವನದ ಭಾಗ. ಆದರೆ ಪ್ರಯತ್ನವೇ ನಿಮ್ಮ ನಿಜವಾದ ಜಯ. ಭಯವಿಲ್ಲದೆ ಕನಸು ಕಾಣಿರಿ, ತಪ್ಪುಗಳಿಂದ ಕಲಿಯಿರಿ ಮತ್ತು ಹಿಂಜರಿಯದೆ ಮುಂದೆ ಸಾಗಿರಿ. ನಿಮ್ಮೊಳಗಿನ ಪ್ರತಿಭೆ ಒಂದು ದಿನ ನಿಮ್ಮನ್ನು ದೊಡ್ಡ ವೇದಿಕೆಗೆ ಕರೆದೊಯ್ಯಲಿದೆ. ವಿದ್ಯಾಭ್ಯಾಸದ ಜೊತೆಗೆ ಮಾನವೀಯ ಮೌಲ್ಯಗಳನ್ನು ಕಾಪಾಡಿಕೊಂಡು ಸಾಗಿದರೆ ನೀವು ಸಮಾಜಕ್ಕೆ ಬೆಳಕಾಗುತ್ತೀರಿ ಎಂದರು.

ಉರ್ದು ಭಾಷಣ, ಪ್ರಬಂಧ, ಕವನ ಪಠಣ, ನಾಟಕ, ಚಿತ್ರಕಲೆ, ವಾದ-ವಿವಾದ, ಸಾಮಾನ್ಯ ಜ್ಞಾನ, ಕವಾಲಿ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳು ನಡೆದವು. ವಿದ್ಯಾರ್ಥಿಗಳು ತಮ್ಮ ಕಲಾತ್ಮಕತೆ, ಬೌದ್ಧಿಕ ಶಕ್ತಿ ಹಾಗೂ ಆತ್ಮವಿಶ್ವಾಸದ ಮೂಲಕ ಪ್ರೇಕ್ಷಕರ ಗಮನ ಸೆಳೆದರು. ಉರ್ದು ಭಾಷೆಯ ಸೌಂದರ್ಯ, ಸಾಹಿತ್ಯದ ಶ್ರೀಮಂತಿಕೆ ಮತ್ತು ಸಾಂಸ್ಕೃತಿಕ ವೈವಿಧ್ಯತೆ ಕಾರ್ಯಕ್ರಮದ ಮೂಲಕ ಜೀವಂತವಾಗಿ ಮೂಡಿಬಂತು.

ಗದಗ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ರವೀಂದ್ರ ಶೆಟ್ಟಪ್ಪನವರ ಮಾತನಾಡಿ, ಇತ್ತೀಚಿನ ಆಧುನಿಕ, ತಂತ್ರಜ್ಞಾನ ಭರಾಟೆಯಲ್ಲಿ ವಿದ್ಯಾರ್ಥಿಗಳು ಸಾಂಸ್ಕೃತಿಕ, ಜನಪದ, ಕವಾಲಿ ಸೇರಿದಂತೆ ಸಾಂಪ್ರದಾಯಿಕ ಕಲೆಗಳನ್ನು ಮರೆಯುತ್ತಿದ್ದಾರೆ. ಪಾಲಕರು ಸದ್ಯ ಮಕ್ಕಳು ಚೆನ್ನಾಗಿ ಓದಬೇಕು, ಹೆಚ್ಚು ಅಂಕ ಪಡೆಯಬೇಕು ಎನ್ನುವ ಹಂಬಲದಿಂದ ಮಕ್ಕಳ ಸಾಂಸ್ಕೃತಿಕ ಮನೋಭಾವ ಕ್ಷೀಣಿಸುತ್ತಿದೆ. ಆದರೆ, ಸರ್ಕಾರದ ಯೋಜನೆಗಳನ್ನು ಮಕ್ಕಳನ್ನು ಸದೃಢವಾಗಿಸಲು ಕ್ರೀಡಾಕೂಟ, ಪ್ರತಿಭಾ ಕಾರಂಜಿ ಸೇರಿದಂತೆ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದೆ. ಇದರಿಂದ ಮಕ್ಕಳಲ್ಲಿ ವಿದ್ಯೆಯ ಜೊತೆಗೆ ತಮ್ಮಲ್ಲಿನ ಕೌಶಲ್ಯವನ್ನು ಹೊರಹಾಕಲು ಪ್ರೇರಣೆ ನೀಡಿದಂತಾಗುತ್ತದೆ ಎಂದರು.

ಬಿಆರ್‌ಪಿ ಎಸ್.ಬಿ. ಪ್ರಭಯ್ಯನಮಠ, ಬಿಆರ್‌ಸಿ ಶಫೀ ಯರಗುಡಿ, ಸಿಆರ್‌ಪಿ ಖಲೀಲ ಜಲಗೇರಿ, ಸ್ಕೂಲ್ ಕಮಿಟಿಯ ಸದಸ್ಯರಾದ ಶಾಹನವಾಜ ಉಮಚಗಿ, ಎ.ಎಂ. ಮುಲ್ಲಾ, ಆರ್.ಎಲ್. ಬಾಗಲಕೋಟ, ಕೆ.ಎಂ. ಶೇಖ, ಜೀಲಾನಿ ಉಮಚಗಿ, ಮಹ್ಮದ ಇಕ್ಬಾಲ್ ಹಣಗಿ, ಎಸ್.ಎ. ಬಿಜಾಪೂರ ಸೇರಿದಂತೆ 8ನೇ ಕ್ಲಸ್ಟರ್ ಮಟ್ಟದ ಮುಖ್ಯ ಶಿಕ್ಷರು, ಸಹ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka